ಗರಿಷ್ಠ 37°c | ಕನಿಷ್ಠ 25°c

ಸುದ್ದಿ ಸಿಂಚನ

12ರಂದು ಕೋಟಿ ಗಾಯತ್ರಿ ಮಹಾಯಜ್ಞದ ವಾರ್ಷಿಕೋತ್ಸವ

ರಾಣೆಬೆನ್ನೂರು: ನಗರದಲ್ಲಿ ಜರುಗಿದ ಕೋಟಿ ಗಾಯತ್ರಿ ಮಹಾಯಜ್ಞದ 20ನೇ ವಾರ್ಷಿಕೋತ್ಸವ ಸಮಾರಂಭದ ಅಂಗವಾಗಿ ನಗರದ ಬಿಎಜೆಎಸ್‌ಎಸ್ ಮಹಿಳಾ ವಿದ್ಯಾಲಯದ ಆವರಣದಲ್ಲಿ ಮೇ 12ರಂದು ಬೆಳಗ್ಗೆ 8ರಿಂದ ಮಧ್ಯಾಹ್ನ 1.30ರ ವರೆಗೆ ಶ್ರೀ ಗಾಯತ್ರಿದೇವಿ ಹೋಮ ಹವನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಸಾಗರ ವೀರಾಪೂರ ಹಿರೇಮಠದ ಡಾ. ಮರುಳಶಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು, ಸ್ಥಳೀಯ ರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷ ಪ್ರಕಾಶಾನಂದಜಿ ಮಹಾರಾಜ್ ಸಾನ್ನಿಧ್ಯ ವಹಿಸುವರು.

ಸಮಾರಂಭದಲ್ಲಿ ರಾಜ್ಯ ಮಟ್ಟದ ಕೃಷಿ ಪಂಡಿತ ಪ್ರಶಸ್ತಿ ಪುರಸ್ಕೃತ ಶಂಕರಗೌಡ ಪಾಟೀಲ, ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಗೋವಿಂದ ಚಿಮ್ಮಲಗಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪುಟ್ಟಪ್ಪ ಮರಿಯಮ್ಮನವರ, ಗ್ರಾಮೀಣ ಬ್ಯಾಂಕ್ ಅಧ್ಯಕ್ಷ ಚಂದ್ರಣ್ಣ ಬೇಡರ ಇವರುಗಳಿಗೆ ಸನ್ಮಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಕೃಷಿ ಹೊಂಡ ನಿರ್ಮಾಣಕ್ಕೆ ಅರ್ಜಿ ಆಹ್ವಾನ

ಹಿರೇಕೆರೂರು: ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಾಣಕ್ಕೆ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಿಸಿಕೊಳ್ಳಲು ಅರ್ಜಿ ಸಲ್ಲಿಸಿದ ಎಲ್ಲ ರೈತರಿಗೂ ಅವಕಾಶವಿದೆ. ರೈತರಿಗೆ ಟಾರ್ಪಲಿನ್, ಲೈನಿಂಗ್, ಡೀಸೆಲ್ ಇಂಜಿನ್, ಬದು ನಿರ್ಮಾಣ, ತುಂತುರು ನೀರಾವರಿ ಘಟಕ ಮತ್ತು ಹೊಂಡದ ಸುತ್ತಲೂ ತಂತಿಬೇಲಿ ಅಳವಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಅರ್ಜಿ ಸಲ್ಲಿಸಿದ ರೈತರು ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ಕೃಷಿ ಹೊಂಡ ಕಾಮಗಾರಿಗಳನ್ನು ಅನುಷ್ಠಾನ ಮಾಡಿಕೊಳ್ಳಬೇಕು. ಹಾಗೂ ಹೊಸದಾಗಿ ಅರ್ಜಿ ಸಲ್ಲಿಸುವ ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ಮಾರುತಿ ಅಂಗರಗಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾಕ್ಟರೆಟ್ ಪದವಿ ಪ್ರದಾನ



ರಾಜ್ಯಪಾಲರಾದ ಥಾವರಚಂದ್ ಗೆಹಲೋತ್ ಅವರು ಗಂಗರಾಜು ಅವರಿಗೆ ಡಾಕ್ಟರೆಟ್ ಪದವಿ ಪ್ರದಾನ ಮಾಡಿದರು.

ಹಿರೇಕೆರೂರು: ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ವಿಷಯದ ಸಹಾಯಕ ಪ್ರಾಧ್ಯಾಪಕ ಗಂಗರಾಜು ಮಂಡಿಸಿದ ದಿ ಚಾಲೇಂಜಸ್ ಆಂಡ್ ಅಪಾರ್ಚುನಟೀಸ್ ಆಫ್ ಅನಿಮಲ್ ಹಸ್ಬೆಂಡ್ರಿ ಇನ್ ಕರ್ನಾಟಕ ಎ ಕೇಸ್ ಸ್ಟಡಿ ಆಫ್ ರಾಮನಗರ ಡಿಸ್ಟ್ರಿಕ್ ಮಹಾಪ್ರಬಂಧಕ್ಕೆ ಶಿವಮೊಗ್ಗದ ಕುವೆಂಪು ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ದೊರೆತಿದೆ. ಅವರಿಗೆ ಪ್ರೊ.ಎಸ್.ಎನ್. ಯೋಗೀಶ ಮಾರ್ಗದರ್ಶನ ನೀಡಿದ್ದರು. ಇತ್ತೀಚೆಗೆ ನಡೆದ ಕುವೆಂಪು ವಿಶ್ವವಿದ್ಯಾಲಯದ 35ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಾದ ಥಾವರಚಂದ್ ಗೆಹಲೋತ್ ಅವರು ಪದವಿ ಪ್ರಧಾನ ಮಾಡಿದರು. ಸಚಿವ ಡಾ. ಎಂ.ಸಿ. ಸುಧಾಕರ, ಕುಲಪತಿಗಳಾದ ಶರತ ಅನಂತಮೂರ್ತಿ ಇದ್ದರು.



ಹಾನಗಲ್ಲಿನಲ್ಲಿ ಗಂಗಾಮತ ಸಮುದಾಯದ ಗಂಗಾಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆ ಸಂದರ್ಭದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಗುರುಪೀಠದ ಶಾಂತಭೀಷ್ಮ ಚೌಡಯ್ಯ ಮಹಾಸ್ವಾಮಿಗಳು, ಹುಬ್ಬಳ್ಳಿ ಜಗದ್ಗುರು ಗುರುಸಿದ್ಧರಾಜಯೋಗೀಂದ್ರ ಸ್ವಾಮಿಗಳು ಪಾಲ್ಗೊಂಡಿದ್ದರು.



ಹಾವೇರಿ ತಾಲೂಕಿನ ದೇವಗಿರಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ ಕಾಲೇಜ್ ವಾರ್ಷಿಕೋತ್ಸವ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಡಾ. ರಾಘವೇಂದ್ರ ಜಿಗಳಿಕೊಪ್ಪ ಉದ್ಘಾಟಿಸಿದರು.

ಕಾಲೇಜ್ ವಾರ್ಷಿಕೋತ್ಸವ

• **ಕನ್ನಡಪ್ರಭ ವಾರ್ತೆ** ಹಾವೇರಿ

ವಿದ್ಯಾರ್ಥಿಗಳು ಕಾಲೇಜ್ ದಿನಗಳಲ್ಲೇ ಕೌಶಲದ ಜತೆಗೆ ಸಮಯಪ್ರಜ್ಞೆ ಬೆಳೆಸಿಕೊಂಡರೆ ಜೀವನದಲ್ಲಿ ಯಶಸ್ಸು ಸಾಧಿಸಬಹುದು ಎಂದು ನಗರದ ಚರ್ಮರೋಗ ತಜ್ಞ, ರಕ್ಷಾ ಹೆಲ್ತ್ ಕೇರ್‌ಚೇರ್ಮನ್ ಡಾ. ರಾಘವೇಂದ್ರ ಜಿಗಳಿಕೊಪ್ಪ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ತಾಲೂಕಿನ ದೇವಗಿರಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜ್‌ನಲ್ಲಿ ಶುಕ್ರವಾರ ಆಯೋಜಿಸಿದ್ದ ಕಾಲೇಜ್ ವಾರ್ಷಿಕೋತ್ಸವ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ಪ್ರಾಂಶುಪಾಲ ಡಾ. ಮುನಿರಾಜು ಎಂ. ಕಾಲೇಜ್‌ನ ವಾರ್ಷಿಕ ವರದಿ ವಾಚನ ಮಾಡಿದರು. ಸಮಾರಂಭದಲ್ಲಿ ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥ ಡಾ. ಈರಪ್ಪ ಹುನಗುಂದ, ಸಿವಿಲ್ ವಿಭಾಗದ ಡಾ. ವಾಹಿನಿ ಎಂ., ಇಸಿ ವಿಭಾಗದ ಡಾ. ಯಶವಂತಕುಮಾರ ಟಿ.ಆರ್., ಕಂಪ್ಯೂಟರ್ ಸೈನ್ಸ್ ವಿಭಾಗದ ಡಾ. ನವೀನ್ ಟಿ.ಎಚ್., ಪ್ರಥಮ ವರ್ಷದ ಸಂಯೋಜಕ ಡಾ. ಕಾಂತರಾಜ ಕೆ.ಪಿ., ರಜಿಸ್ಟ್ರಾರ್‌ಜಿ.ಮಂಜುನಾಥ ಇದ್ದರು. ನೃತ್ಯ, ಗಾಯನದ ಸಂಭ್ರಮ ವೇದಿಕೆ ಸಮಾರಂಭದ ಬಳಿಕ ವಿದ್ಯಾರ್ಥಿಗಳಿಂದ ಆಕರ್ಷಕವಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಮಠಾಧೀಶರು ಸಮಾಜಕ್ಕೆ ಸರಿಯಾದ ದಿಕ್ಕು ತೋರುವ ಸಂಕಲ್ಪ ಮಾಡಬೇಕು

ಗಂಗಾಮತ ಸಮುದಾಯದ ಗಂಗಾ ಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಮಠಾಧೀಶರು ಸಮಾಜಕ್ಕೆ ಸರಿಯಾದ ದಿಕ್ಕು ತೋರುವ ಸಂಕಲ್ಪ ಮಾಡಬೇಕಾಗಿದ್ದು, ಈ ದೇಶದ ಭವಿಷ್ಯದ ಇಂದಿನ ಮಕ್ಕಳಿಗೆ ಸರಿಯಾದ ಸಂಸ್ಕಾರ ವಿದ್ಯೆ ನೀಡುವ ತೀರ ಅಗತ್ಯವೂ ಇದೆ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಎನ್. ರವಿಕುಮಾರ ತಿಳಿಸಿದರು.

ಶುಕ್ರವಾರ ಹಾನಗಲ್ಲಿನಲ್ಲಿ ಗಂಗಾಮತ ಸಮುದಾಯದ ಶ್ರೀ ಗಂಗಾ ಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆ ಸಮಾರಂಭದಲ್ಲಿ ಸಭಾಮಂಟಪ ಉದ್ಘಾಟಿಸಿ ಮಾತನಾಡಿದ ಅವರು, ಮಕ್ಕಳೇ ನಮ್ಮ ಸಮಾಜದ ನಿಜವಾದ ಆಸ್ತಿ. ಮಕ್ಕಳ ಕೈಯಲ್ಲಿ ಮೊಬೈಲ್ ಕೊಟ್ಟು ನಿರಾಳವಾಗಿರಬೇಡಿ, ಮಕ್ಕಳಿಗೆ ಉತ್ತಮ ಸಂಸ್ಕಾರನೀಡುವ ಇಚ್ಛಾಶಕ್ತಿ ನಿಮ್ಮದಾಗಲಿ. ಮಠಗಳಿಂದ ಆಯಾ ಸಮಾಜದ ಅಭಿವೃದ್ಧಿಯಾಗಬೇಕಲ್ಲದೆ, ಸಮಾಜದ ಅಭಿವೃದ್ಧಿಯಲ್ಲಿ ಇಡೀ ದೇಶದ ಹಿತವಿದೆ ಎಂದರು.

ಮಾಜಿ ಸಚಿವ ನಿಜಶರಣ ಅಂಬಿಗರ ಚೌಡಯ್ಯ ಗುರುಪೀಠದ ಕಾರ್ಯಾಧ್ಯಕ್ಷ ಪ್ರಮೋದ ಮಧ್ವರಾಜ ಮಾತನಾಡಿ, ನಮ್ಮ ಮನಸ್ಸು ತಾಯ್ತನದ ಭಾವನೆಗಳನ್ನು ಹೊಂದಿರಬೇಕು. ಸಮಾಜವನ್ನು ಉತ್ತಮವಾಗಿ ಕೊಂಡೊಯ್ಯಲು ಸಮಾಜಮುಖಿ ಚಿಂತನೆ ಮೊದಲು ಬೇಕು. ನಾವು ಸಮಾಜಕ್ಕೆ ಶಕ್ತಿಯಾಗಬೇಕು. ಸಮಾಜದಲ್ಲಿ ಬಿಕ್ಕಟ್ಟು ಸೃಷ್ಟಿಸುವವರ ಅಗತ್ಯ ನಮಗಿಲ್ಲ. ಒಗ್ಗಟ್ಟು ಮೂಡಿಸುವವರು ಬೇಕಾಗಿದ್ದಾರೆ. ಎಲ್ಲ ಕಾಲಕ್ಕೂ ಸಲ್ಲುವ ಒಳ್ಳೆಯ ಕೆಲಸಗಳಲ್ಲಿ ತೃಪ್ತಿ ಕಾಣಬೇಕಾಗಿದೆ ಎಂದರು.

ಹುಬ್ಬಳ್ಳಿ ಮೂರುಸಾವಿರಮಠದ ಜಗದ್ಗುರು ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮಿಗಳು ಸಮ್ಮುಖವಹಿಸಿ ಮಾತನಾಡಿ, ಮನಸ್ಸು ಮನಸ್ಸುಗಳನ್ನು ಕಟ್ಟುವ ಕೆಲಸಕ್ಕೆ ಆದ್ಯತೆ ನಮ್ಮ ಮನಸ್ಸಿನಲ್ಲಿದ್ದರೆ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಸಮಾಜದಲ್ಲಿ ವ್ಯಕ್ತಿಯ ದಾನ ತ್ಯಾಗದಿಂದ ಒಳ್ಳೆಯ ಕೆಲಸಗಳು ಸಾಧ್ಯ. ಅದಕ್ಕಾಗಿ ಸಮಾಜವನ್ನು ಒಟ್ಟಾಗಿ ಜೋಡಿಸಿಕೊಂಡು ಹೋಗುವ ಸಮರ್ಥ ನಾಯಕರ ಕೈಯಲ್ಲಿ ಸಮಾಜವಿರಬೇಕು. ಗಂಗಾಮತ ಸಮುದಾಯ ಎಲ್ಲ ಕಾಲಕ್ಕೂ ಒಳ್ಳೆಯದನ್ನೇ ಬಯಸಿದ ಸಮುದಾಯ. ನಿಜಶರಣ ಅಂಬಿಗರ ಚೌಡಯ್ಯನವರ ಪೀಠ ಸ್ಥಾಪನೆಯಿಂದ ಈ ಸಮುದಾಯದಲ್ಲಿ ಒಳ್ಳೆಯ ಒಗ್ಗಟ್ಟು ಸಾಧಿಸುತ್ತಿದೆ. ಇದು ಒಳ್ಳೆಯ ಬೆಳವಣಿಗೆ ಎಂದರು.

ಸುಕ್ಷೇತ್ರ ನರಸಿಪುರ ನಿಜಶರಣ ಅಂಬಿಗರ ಚೌಡಯ್ಯ ಗುರುಪೀಠದಶಾಂತಭೀಷ್ಮಚೌಡಯ್ಯ ಮಹಾಸ್ವಾಮಿಗಳು ಸಾನಿಧ್ಯವಹಿಸಿದ್ದರು. ಶಾಸಕ ಶ್ರೀನಿವಾಸ ಮಾನೆ ಸಮುದಾಯ ಭವನದ ಭೋಜನಾಲಯ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಭೂದಾನ ಮಾಡಿದ ಚಂದ್ರಶೇಖರ, ಮೋಹನ, ಪ್ರಭು, ಮಾಲತಿ ಮಲಗುಂದ ಹಾಗೂ ಚಂದ್ರಕಲಾ ಶಿವಪುತ್ರಪ್ಪ ಶೇಷಗಿರಿ ಅವರನ್ನು ಸನ್ಮಾನಿಸಲಾಯಿತು. ಗಂಗಾಮತ ಸಮಾಜ ಸೇವಾ ಸಂಸ್ಥೆ ಅಧ್ಯಕ್ಷ ಅನಂತವಿಕಾಸ ನಿಂಗೋಜಿ ಅಧ್ಯಕ್ಷತೆವಹಿಸಿದ್ದರು. ಧಾರವಾಡದ ನೆಲ ಜಲ ನಿರ್ವಹಣಾ ವಿಭಾಗದ ಅಧೀಕ್ಷಕ ಅಭಿಯಂತರ ಬಿ.ವಾಯ್.ಬಂಡಿವಡ್ಡರ, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಭೋಜರಾಜ ಕರೂದಿ, ಲಕ್ಷ್ಮೀ ನಾರಾಯಣಗೌಡ ಪಾಟೀಲ, ತಾಲೂಕು ಗಂಗಾಮತ ಸಮಾಜದ ಅಧ್ಯಕ್ಷ ಪ್ರದೀಪ ಶೇಷಗಿರಿ, ಹಾನಗಲ್ಲ ನಗರಘಟಕದ ಅಧ್ಯಕ್ಷ ಭಾಸ್ಕರ ಹುಲಮನಿ, ನೌಕರರ ಘಟಕದ ಅಧ್ಯಕ್ಷ ಕಠಾರಿ ಮುಖ್ಯ ಅತಿಥಿಗಳಾಗಿದ್ದರು.

ಮಮತಾ ಹಾಗೂ ಅಶೋಕ ಆರೆಗೊಪ್ಪ ಪ್ರಾರ್ಥನೆ ಹಾಡಿದರು. ಕಾರ್ಯದರ್ಶಿ ನಾಗರಾಜ ಬಾರ್ಕಿ ಸ್ವಾಗತಿಸಿದರು. ಬಾಲಚಂದ್ರ ನಿರೂಪಿಸಿದರು.



ಹಾನಗಲ್ಲಿನಲ್ಲಿ ಶ್ರೀ ಗಂಗಾ ಪರಮೇಶ್ವರಿ ಸಮುದಾಯ ಭವನ ಲೋಕಾರ್ಪಣೆ ಸಮಾರಂಭವನ್ನು ಮಾಜಿ ಸಚಿವ ಪ್ರಮೋದ ಮಧ್ವರಾಜ ಉದ್ಘಾಟಿಸಿದರು.

> **ಸಮಾಜದ ಕಳಕಳಿಗೆ ಭೂದಾನ ಮಾಡಿದ್ದರಿಂದಲೇ ಆಸ್ಪತ್ರೆ, ಸಮುದಾಯ ಭವನ, ಆಸ್ಪತ್ರೆಗಳು ನಿರ್ಮಾಣವಾದವು. ಇಂದು ಸ್ಮಶಾನಕ್ಕೂ ಭೂಮಿ ಸಿಗುತ್ತಿಲ್ಲ. ಇಲ್ಲಿ ಗಂಗಾಪರಮೇಶ್ವರಿ ಸಮುದಾಯ ಭವನ ನಿರ್ಮಾಣವಾಗಿರುವುದು ಅತ್ಯಂತ ಸಂತಸಕರ ಸಂಗತಿ. ಇದರೊಂದಿಗೆ ಅಂಬಿಗರ ಚೌಡಯ್ಯನವರ ವಚನಗಳ ಸಾರ ಅರಿತು ನಡೆಯುವುದು ಕೂಡ ಅಷ್ಟೇ ಮುಖ್ಯವಾಗಿದೆ.**
> • **ಶ್ರೀನಿವಾಸ ಮಾನೆ** ಶಾಸಕ

ಕ್ರೀಡಾಪಟುಗಳಿಂದ ಜಿಲ್ಲಾಧಿಕಾರಿಗಳಿಗೆ ಮನವಿ

ಮಹಿಳಾ ಕಬಡ್ಡಿ ಕ್ರೀಡಾಪಟುಗಳ ಅವಮಾನ: ಕ್ರಮಕ್ಕೆ ಆಗ್ರಹ

• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ತುಮಕೂರು ಜಿಲ್ಲೆ ಕೊರಟಗೆರೆಯಲ್ಲಿ ಮೇ 1 ಮತ್ತು 2ರಂದು ನಡೆದ ರಾಜ್ಯಮಟ್ಟದ ಕಬಡ್ಡಿ ಪಂದ್ಯಾವಳಿಯಲ್ಲಿ ಹಾವೇರಿ ಜಿಪಂ ಮಹಿಳಾ ತಂಡಕ್ಕೆ ಅವಕಾಶ ನೀಡದೆ ಅಮಾನವೀಯವಾಗಿ ನಡೆಸಿಕೊಂಡು ಕ್ರೀಡಾಪಟುಗಳ ಮೇಲೆ ದೌರ್ಜನ್ಯವೆಸಗಿದ್ದಲ್ಲದೇ ಪಂದ್ಯಾವಳಿಯಿಂದ ಹೊರ ಹಾಕಿದ ಹಾವೇರಿ ಜಿಲ್ಲಾ ಅಮೇಚೂರ ಕಬಡ್ಡಿ ಸಂಸ್ಥೆ ಕಾರ್ಯದರ್ಶಿ ಶ್ರೀಧರ ಕಾಗಿನೆಲ್ಲಿ, ಗ್ಯಾಲರಿ ಮಾಲೀಕ ಶೇಖರ ಹಾಗೂ ತೀರ್ಪುಗಾರ ನಂಜೇಶಗೌಡ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಹಾಗೂ ರಾಜ್ಯ ಮತ್ತು ರಾಷ್ಟ್ರದ ವಿವಿಧೆಡೆ ನಡೆಯುವ ಕಬಡ್ಡಿ ಪಂದ್ಯಾವಳಿಗಳಲ್ಲಿ ಮಹಿಳಾ ತಂಡ ಪಾಲ್ಗೊಳ್ಳಲು ರಾಜ್ಯದೆಲ್ಲೆಡೆ ಮುಕ್ತ ಅವಕಾಶ ಕಲ್ಪಿಸುವಂತೆ ಆಗ್ರಹಿಸಿ ಕ್ರೀಡಾಪಟುಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.


ಈ ವೇಳೆ ಮಾತನಾಡಿದ ಕೋಚ್ ಮಂಜುಳ ಭಜಂತ್ರಿ, ಶಾಸಕ ಶಿವಣ್ಣನವರ ಸೇರಿದಂತೆ ಜಿಲ್ಲೆಯ ಎಲ್ಲಾ ಶಾಸಕರ ಹಾಗೂ ಅಧಿಕಾರಿಗಳ ಸಹಯೋಗದೊಂದಿಗೆ ಸುಮಾರು 40ಕ್ಕೂ ಹೆಚ್ಚು ಕ್ರೀಡಾಪಟುಗಳಿಗೆ ಕಳೆದ 8 ವರ್ಷದಿಂದ ತರಬೇತಿ ನೀಡುತ್ತಾ ಬಂದಿದ್ದು, ಇಲ್ಲಿ ತರಬೇತಿ ಪಡೆಯುತ್ತಿರುವ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ವಿಶ್ವವಿದ್ಯಾಲಯ ಸೇರಿದಂತೆ ಪದವಿ ಪೂರ್ವ ಶಿಕ್ಷಣ ಇಲಾಖೆ ಕ್ರೀಡಾಕೂಟದಲ್ಲಿ ಉತ್ತಮ ಪ್ರದರ್ಶನ ತೋರಿದ್ದಲ್ಲದೇ ಕಳೆದ ವರ್ಷ ಹಾವೇರಿ ವಿಶ್ವವಿದ್ಯಾಲಯ ತಂಡದಲ್ಲಿ 12 ಕ್ರೀಡಾಪಟುಗಳಿದ್ದು, ಪದವಿಪೂರ್ವ ಶಿಕ್ಷಣ ಇಲಾಖೆ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ರುಕ್ಸಾರ ಖತೀಬ್ ಪಾಲ್ಗೊಂಡಿದ್ದಳು. ಇಂತಹ ಕ್ರೀಡಾಪಟುಗಳನ್ನು ಅಮಾನವೀಯವಾಗಿ ನಡೆಸಿಕೊಂಡಿದ್ದು ದುರದೃಷ್ಟಕರ ಘಟನೆ ಮತ್ತೊಮ್ಮೆ ಮರುಕಳಿಸದಂತೆ ಹಾಗೂ ಮುಕ್ತ ಅವಕಾಶ ನೀಡುವಂತೆ ಆಗ್ರಹಿಸಿದರು.

ಗೃಹ ಸಚಿವರ ನಡೆಸಿದ ಪಂದ್ಯಾವಳಿಯಲ್ಲೇ ಅವಮಾನ: ರೈತ ಸಂಘದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಬಳ್ಳಾರಿ ಮಾತನಾಡಿ, ಕೊರಟಗೆರೆ ಜಿಲ್ಲಾ ಪಂಚಾಯತ್ ತಂಡಕ್ಕೆ ಮೊದಲು ಆಹ್ವಾನ ನೀಡಿ ಬಳಿಕ ಆಟವಾಡಲು ನಿರಾಕರಿದ್ದು ಖಂಡನಾರ್ಹ, ಪ್ರಶ್ನಿಸಿದ್ದಕ್ಕೆ ಜಿಲ್ಲಾ ಕಾರ್ಯದರ್ಶಿ ಶ್ರೀಧರ ಕಾಗಿನೆಲ್ಲಿ ಅವರಿಂದ ಅನುಮತಿ ಪಡೆಯುವಂತೆ ತಿಳಿಸುವುದು ಎಷ್ಟರಮಟ್ಟಿಗೆ ಸರಿ? 300 ಕಿ.ಮೀ. ತೆರಳಿದ ಕ್ರೀಡಾಪಟುಗಳಿಗೆ ಅದರಲ್ಲೂ ಗೃಹಸಚಿವರ ಹೆಸರಿನಲ್ಲಿ ನಡೆದ ಪಂದ್ಯಾವಳಿಯಲ್ಲಿ ಮಾಡಿರುವ ಅವಮಾನದಿಂದ ರಾಜ್ಯದ ಕ್ರೀಡಾಪಟುಗಳು ತಲೆ ತಗ್ಗಿಸುವಂತಾಗಿದ್ದು, ಇಲ್ಲಿ ತರಬೇತಿ ಪಡೆಯುತ್ತಿರುವ ರೈತರ, ದಲಿತರ, ಬಡವರ ಮಕ್ಕಳಿಗೆ ನ್ಯಾಯ ಕೊಡಿಸವವರು ಯಾರು..? ತಪ್ಪಿತಸ್ಥರ ವಿರುದ್ಧ ಕ್ರಮವಾಗದಿದ್ದರೇ ಹೋರಾಟ ನಿಶ್ಚಿತ ಎಂದು ಪ್ರಶ್ನಿಸಿದರು.

ಜಿಲ್ಲೆಯಲ್ಲೇ ಕಬಡ್ಡಿ ನಶಿಸುತ್ತಿದೆ: ರೈತ ಮುಖಂಡ ಗಂಗಣ್ಣ ಎಲಿ ಮಾತನಾಡಿ, ಹಾವೇರಿ ಜಿಲ್ಲಾ ಪಂಚಾಯತ್ ತಂಡ ವನ್ನು ಹೊರಗೆ ಹಾಕಲು ಕಾರಣವೇನು? ಎಂದು ಲಿಖಿತ ಉತ್ತರ ನೀಡದೇ ಕಳುಹಿಸಿದ್ದಾರೆ, ಹಾವೇರಿ ಜಿಲ್ಲಾ ಅಮೇಚೂರ ಕಬಡ್ಡಿ ಸಂಸ್ಥೆ ಹಾವೇರಿ ಇದರ ಪದಾಧಿಕಾರಿಗಳು ಜಿಲ್ಲೆಯಲ್ಲಿ ಕಬಡ್ಡಿ ನಶಿಸುವಂತೆ ನೋಡಿಕೊಳ್ಳುತ್ತಿದ್ದಾರೆ. ರಾಜ್ಯದಲ್ಲಿ ಉತ್ತಮ ಹೆಸರನ್ನು ಪಡೆದ ಮಹಿಳಾ ತಂಡದ ನೈತಿಕಶಕ್ತಿ ಕುಂದಿಸುವ ಹುನ್ನಾರ ಇದರಲ್ಲಡಗಿದೆ ಬಡ, ದಲಿತ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ಕ್ರೀಡಾಪಟುಗಳಿಗೆ ಅನ್ಯಾಯವೆಸಗಿದ್ದು ಸಂಸ್ಥೆ ವಿರುದ್ಧ ಕ್ರಮ ಜರುಗಿಸಬೇಕಲ್ಲದೇ ಸಹಕಾರ ಇಲಾಖೆ ಉಪನಿಬಂಧಕರು ಹಾವೇರಿ ಸದರಿ ಸಂಸ್ಥೆಯ ನೋಂದಣಿ ರದ್ದುಪಡಿಸುವಂತೆ ಆಗ್ರಹಿಸಿದರು.

ಕ್ರಮದ ಭರವಸೆ: ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ನಮ್ಮದೆ ಜಿಲ್ಲಾ ಪಂಚಾಯತ್ ತಂಡಕ್ಕೆ ಇಂತಹ ಪರಿಸ್ಥಿತಿ ಬಂದಿರುವುದನ್ನು ಹಾಗೂ ಅದನ್ನು ಗಮನಕ್ಕೆ ತಂದಿರುವುದನ್ನು ಸ್ವಾಗತಿಸುತ್ತೇನೆ. ಪೊಲೀಸ್ ಇಲಾಖೆ ನಿರ್ದೇಶನ ನೀಡುವ ಮೂಲಕ ತಪ್ಪತಸ್ಥರನ್ನು ಕರೆತಂದು ವಿಚಾರಣೆ ನಡೆಸಿ ಮುಂದೆ ಹೀಗಾಗದಂತೆ ನೋಡಿಕೊಳ್ಳುವ ಭರವಸೆ ನೀಡಿದರು.

ಈ ವೇಳೆ ನ್ಯಾಯವಾದಿ ಸುರೇಶ ಛಲವಾದಿ ಹಾವೇರಿ, ಹಿರಿಯ ಕಬಡ್ಡಿ ಕ್ರೀಡಾಪಟು ಸಿ.ಜಿ. ಚಕ್ರಸಾಲಿ, ಮಲ್ಲಿಕಾರ್ಜುನ ಕೋಡಿಹಳ್ಳಿ, ರಾಜೇಶ ಮಾಳಗಿ, ಎಲ್.ಎಸ್. ಹರಳಹಳ್ಳಿ, ಸುಭಾಸ್ ಮಾಳಗಿ ಇದ್ದರು.



ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುತ್ತಿರುವ ಹಾವೇರಿ ಜಿಲ್ಲಾ ಪಂಚಾಯಿತಿ ತಂಡದ ಮಹಿಳಾ ಕ್ರೀಡಾಪಟುಗಳು.

ಕೊರೋನಾ ವೇಳೆ ಬಲಿಷ್ಠ ನಾಯಕತ್ವ ನಮ್ಮನ್ನು ಕಾಪಾಡಿದೆ



ಬಿಎಸ್‌ವೈ ಅಭಿಮಾನೋತವ ಪೂರ್ವಭಾವಿ ಸಭೆಯಲ್ಲಿ ಬಿಜೆಪಿ ಮುಖಂಡ ಭರತ ಬೊಮ್ಮಾಯಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ದೇಶ ಹಾಗೂ ರಾಜ್ಯಕ್ಕೆ ನರೇಂದ್ರ ಮೋದಿ ಹಾಗೂ ಯಡಿಯೂರಪ್ಪನಂತವರ ನಾಯಕತ್ವದ ಆಡಳಿತವಿಲ್ಲದೇ ಹೋಗಿದ್ದರೇ, ನಾವು, ನೀವೆಲ್ಲ ಕೊರೋನಾ ಸಾಂಕ್ರಾಮಿಕ ಕಾಲದಲ್ಲಿಯೇ ನಮ್ಮ ಜೀವನ ಅಂತ್ಯವಾಗಿರುತ್ತಿತ್ತು. ದೇಶ ಸಂಕಷ್ಟ ಪರಿಸ್ಥಿತಿಯಲ್ಲಿದ್ದಾಗ ಬಲಿಷ್ಠ ನಾಯಕತ್ವದ ಆಡಳಿತ ನಮ್ಮನ್ನು ಕಾಪಾಡಿದೆ ಎಂದು ಶಿಗ್ಗಾಂವಿ ಸವಣೂರು ಮತಕ್ಷೇತ್ರದ ಯುವ ನಾಯಕ ಭರತ ಬೊಮ್ಮಾಯಿ ಹೇಳಿದರು.

ಪಟ್ಟಣದ ಸವಣೂರು ರಸ್ತೆಯಲ್ಲಿನ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ಗೃಹ ಕಚೇರಿಯಲ್ಲಿ ಚಿತ್ರದುರ್ಗದಲ್ಲಿ ಮೇ 9 ರಂದು ನಡೆಯುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪನವರ ರಾಜಕೀಯ ಜೀವನದ 50ನೇ ವರ್ಷಾಚರಣೆಯ ಅಭಿಮಾನೋತ್ಸವ ಕಾರ್ಯಕ್ರಮದ ಬಿಜೆಪಿ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

50 ವರ್ಷಗಳ ಹಿಂದೆ ಕರ್ನಾಟಕ ರಾಜಕೀಯದಲ್ಲಿ ಶಿವಮೊಗ್ಗ ಜಿಲ್ಲೆಯಿಂದ ಕೇವಲ ಎರಡು ಮತಕ್ಷೇತ್ರಗಳಿಂದ ಮಾತ್ರ ಬಿಜೆಪಿ ಅಭ್ಯರ್ಥಿ ಗೆದ್ದು ಬರುತ್ತಿದ್ದರು. ಪುರಸಭೆಯ ಸದಸ್ಯರಾಗಿ ಗೆದ್ದು ಬಂದು ರಾಜಕೀಯ ಪ್ರವೇಶಿಸಿ ರಾಜ್ಯದ ಮುಖ್ಯಮಂತ್ರಿ ಪದವಿವರೆಗೂ ಸಾಗಿ ಒಳ್ಳೇಯ ಸಾಮಾಜಿಕ ಕಲ್ಪನೆಯಲ್ಲಿ ಆಡಳಿತ ನಡೆಸಿಕೊಂಡು ರಾಜ್ಯದ ಜನಮಾನಸದಲ್ಲಿ ಉಳಿದಿದ್ದಾರೆ ಎಂದರು.

ಅಭಿಮಾನೋತ್ಸವದಲ್ಲಿ ಅಭಿಮಾನಿಗಳು ಪಾಲ್ಗೊಳ್ಳಬೇಕು. ಅಲ್ಲದೇ ತಾಲೂಕಿನಿಂದ ಕಾರ್ಯಕರ್ತರ ಪ್ರಯಾಣಕ್ಕೆ ಸಾಕಷ್ಟು ಬಸ್ ವ್ಯವಸ್ಥೆ ಕಲಿಸಿದ್ದು, ಲಕ್ಷಾಂತರ ಸಂಖ್ಯೆಯಲ್ಲಿ ಭಾಗಿಯಾಗಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶಿಗ್ಗಾಂವಿ ಸವಣೂರು ಮತಕ್ಷೇತ್ರದ ಅಧ್ಯಕ್ಷರಾದ ವಿಶ್ವನಾಥ ಹರವಿ ಹಾಗೂ ಶಿವಪುತ್ರಪ್ಪ ಕಲಕೋಟಿ, ಮಲ್ಲಪ್ಪ ಹರಿಜನ, ಧರೆಪ್ಪಗೌಡ ಪಾಟೀಲ, ಶಿವನಗೌಡ ಪಾಟೀಲ, ಗಂಗಾಧರ ಬಾಣದ, ಶಶಿಧರ ಹೊನ್ನಣ್ಣವರ, ತಾಪಂ ಮಾಜಿ ಅಧ್ಯಕ್ಷ ಉಷಾ ಬಿಳಿಕುದರಿ, ನವೀನ ರಾಮಗಿರಿ, ಎಂ.ಎಸ್.ಪಾಟೀಲ, ಮಹಾಬಲೇಶ ಹೊನಕೇರಿ ಅಲ್ಲದೇ ನೂರಾರು ಕಾರ್ಯಕರ್ತರು ಯಡಿಯೂರಪ್ಪ ಅಭಿಮಾನಿಗಳು ಸಭೆಯಲ್ಲಿದ್ದರು.

ಡಿಪ್ಲೊಮಾ ಕೋರ್ಸ್‌ಗಳಿಗೆ ಪ್ರವೇಶ ಪ್ರಾರಂಭ

ಹಾವೇರಿ: ಮೈಸೂರಿನ ಸಿಪೆಟ್ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆಯಲ್ಲಿ 2026-27ನೇ ಸಾಲಿನ ಉದ್ಯೋಗ ಖಚಿತ ಡಿಪ್ಲೊಮಾ ಕೋರ್ಸ್‌ಗಳು ಪ್ರಾರಂಭಗೊಂಡಿದ್ದು, ಜಿಲ್ಲೆಯ ಆಸಕ್ತ ವಿದ್ಯಾರ್ಥಿಗಳು ಪ್ರವೇಶಾವಕಾಶ ಪಡೆದುಕೊಳ್ಳಬೇಕೆಂದು ಸಂಸ್ಥೆಯ ಹಿರಿಯ ಸಹಾಯಕ ಎಂ. ಮಹೇಶ ತಿಳಿಸಿದರು.



ಎಂ. ಮಹೇಶ

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಎಐಸಿಟಿಇ ವತಿಯಿಂದ ಅನುಮೋದನೆಗೊಂಡಿರುವ ಮೈಸೂರಿನ ಸಿಪೆಟ್ ಕೇಂದ್ರೀಯ ಪೆಟ್ರೋಕೆಮಿಕಲ್ಸ್ ಎಂಜಿನಿಯರಿಂಗ್ ಮತ್ತು ತಂತ್ರಜ್ಞಾನ ಸಂಸ್ಥೆಯು ಎಸ್ಸೆಸ್ಸೆಲ್ಸಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳಿಗಾಗಿ ಮೂರು ವರ್ಷಗಳ ಡಿಪ್ಲೊಮಾ ಕೋರ್ಸ್ ಪ್ರಾರಂಭಿಸಲಾಗಿದೆ. ಯುವಕರಲ್ಲಿ ವೃತ್ತಿ ಕೌಶಲ್ಯ ಹೆಚ್ಚಿಸಿ ಕೈಗಾರಿಕಾ ಬೇಡಿಕೆಗೆ ಅನುಗುಣವಾಗಿ ಶಿಕ್ಷಣ ನೀಡಿ ಸ್ವಾವಲಂಬಿಗಳನ್ನಾಗಿ ಮಾಡುವ ಉದ್ದೇಶವನ್ನು ಸಂಸ್ಥೆ ಹೊಂದಿದೆ ಎಂದರು. ಡಿಪ್ಲೊಮಾ ಕೋರ್ಸಗಳಲ್ಲಿ ಪ್ಲಾಸ್ಟಿಕ್ ವೈವಿಧ್ಯಮಯ ಬಳಕೆ, ಪ್ಲಾಸ್ಟಿಕ್ ಮೌಲ್ಡಿಂಗ, ಪ್ಲಾಸ್ಟಿಕ್ ಸಂಸ್ಕರಣೆ, ಪ್ಲಾಸ್ಟಿಕ್ ಗುಣಮಟ್ಟ ಪರಿಶೀಲನೆ, ಆಧುನಿಕ ವಿನ್ಯಾಸದಲ್ಲಿ ಪ್ಲಾಸ್ಟಿಕ್ ವಸ್ತುಗಳ ತಯಾರಿಕೆ, ಪ್ಲಾಸ್ಟಿಕ್ ಮರುಬಳಕೆ ವಿಧಾನ, ಪ್ಲಾಸ್ಟಿಕ್ ಪೈಪ್‌ಗಳು ಮತ್ತು ಇತರೆ ವಸ್ತುಗಳ ತಯಾರಿಕೆ, ಮಾರುಕಟ್ಟೆ ಹಾಗೂ ದರ ಪರಿಷ್ಕರಣೆ ಹೀಗೆ ವಿವಿಧ ವಿಷಯಗಳ ಬಗ್ಗೆ ಮಾಹಿತಿ ಕಲಿಸಲಾಗುತ್ತದೆ ಎಂದರು. ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಟೆಕ್ನಾಲಜಿ (ಡಿಪಿಟಿ) ಹಾಗೂ ಡಿಪ್ಲೊಮಾ ಇನ್ ಪ್ಲಾಸ್ಟಿಕ್ಸ್ ಮೌಲ್ಡ್ ಟೆಕ್ನಾಲಜಿ (ಡಿಪಿಎಂಟಿ) ಕೋರ್ಸಗಳನ್ನು ಪ್ರಾರಂಭಿಸಲಾಗಿದೆ. ತಲಾ 60ರಿಂದ 65 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಇದ್ದು, ಮೂರು ವರ್ಷಗಳ ಕೋರ್ಸ್ ಇವಾಗಿವೆ. ಆಸಕ್ತ ಎಸ್ಸೆಸ್ಸೆಲ್ಸಿ ಪಾಸಾದ ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಳ್ಳಬಹುದು. ಅದೇ ರೀತಿ ಪಿಯುಸಿ ವಿಜ್ಞಾನ ವಿಭಾಗ ಹಾಗೂ ಐಟಿಐನಲ್ಲಿ ತೇರ್ಗಡೆ ಹೊಂದಿದವರಿಗೆ ಡಿಪ್ಲೊಮಾ ಎರಡನೇ ವರ್ಷಕ್ಕೆ ನೇರ ಪ್ರವೇಶ ಸೌಲಭ್ಯ ಇರುತ್ತದೆ. ಜತೆಗೆ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಹಾಸ್ಟೆಲ್, ಸರ್ಕಾರದ ಸ್ಕಾಲರ್‌ಶಿಪ್ ಸೌಲಭ್ಯ ಇರುತ್ತದೆ. ಸ್ಟೈಫಂಡ್ ಜತೆಗೆ 6 ತಿಂಗಳು ತರಬೇತಿ ಕೊಡಿಸಿ, ಶೇ.100ರಷ್ಟು ಉದ್ಯೋಗ ದೊರಕಿಸಿ ಕೊಡಲಾಗುವುದು ಎಂದರು.

ರೆಡ್‌ಕ್ರಾಸ್ ದಿನ...

ವಿಶ್ವ ರೆಡ್ ಕ್ರಾಸ್ ದಿನ ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಸ್.ಪಿ. ಗೌಡರ

ನೈಸರ್ಗಿಕ ವಿಪತ್ತುಗಳ ನಿರ್ವಹಣೆಯಲ್ಲಿ ರೆಡ್‌ಕ್ರಾಸ್ ಪಾತ್ರ ಪ್ರಮುಖ

• **ಕನ್ನಡಪ್ರಭ ವಾರ್ತೆ** ರಾಣಿಬೆನ್ನೂರು

ಜನರಿಂದ ಜನರಿಗೆ ನೆರವು ಎಂಬ ಕಲ್ಪನೆಯೊಂದಿಗೆ ಹುಟ್ಟಿಕೊಂಡ ರೆಡ್ ಕ್ರಾಸ್ ಸಂಸ್ಥೆಯು ವಿಶ್ವದಾದ್ಯಂತ ನೈಸರ್ಗಿಕ ಹಾಗೂ ಮಾನವ ವಿಪತ್ತುಗಳ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಪ್ರಾಚಾರ್ಯ ಪ್ರೊ. ಎಸ್.ಪಿ. ಗೌಡರ ಹೇಳಿದರು.

ತಾಲೂಕಿನ ಸುಣಕಲ್ಲಬಿದರಿ ಗ್ರಾಮದ ಅರಳಿ ಸಿದ್ದಲಿಂಗಪ್ಪ ಬಸಪ್ಪ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಐಕ್ಯೂಎಸಿ ಹಾಗೂ ರೆಡ್ ಕ್ರಾಸ್ ಘಟಕಗಳು ಶುಕ್ರವಾರ ಆಯೋಜಿಸಿದ್ದ ವಿಶ್ವ ರೆಡ್ ಕ್ರಾಸ್ ದಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರೆಡ್ ಕ್ರಾಸ್ ಸಂಸ್ಥೆಯು ಜೀವ ಪರ ಕಾಳಜಿಹೊಂದಿದ್ದು ಮಾನವೀಯತೆಯಿಂದ ಶಾಂತಿಯ ಕಡೆಗೆ ಎಂಬ ಧ್ಯೇಯ ವಾಕ್ಯದೊಂದಿಗೆ ಕಾರ್ಯಾಚರಿಸುತ್ತಿದೆ. ಇದರ ಉಗಮವು ಮಾನವ ಇತಿಹಾಸದಲ್ಲಿ ಒಂದು ಕುತೂಹಲಕಾರಿ ಅಧ್ಯಾಯ ಎಂದೇ ಹೇಳಬಹುದು. ರೆಡ್ ಕ್ರಾಸ್ ಸಂಸ್ಥೆಯ ಸ್ಥಾಪಕ ಹೆನ್ರಿ ಡ್ಯೂನಾಂಟ್ ಅವರ ಜನ್ಮದಿನ ಮೇ 8ನ್ನು ವಿಶ್ವ ರೆಡ್ ಕ್ರಾಸ್ ದಿನ ಎಂದು ಆಚರಿಸಲಾಗುತ್ತದೆ ಎಂದರು. ಮಾನವನು ಆಪತ್ತಿನಲ್ಲಿ ಸಿಲುಕಿಕೊಂಡಾಗ ಕೂಡಲೇ ಸಹಾಯ ಮಾಡುವ ಮಾನವೀಯ ಗುಣಗಳನ್ನು ಬೆಳೆಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.



ರಾಣಿಬೆನ್ನೂರು ತಾಲೂಕಿನ ಸುಣಕಲ್ಲಬಿದರಿ ಗ್ರಾಮದ ಅರಳಿ ಸಿದ್ದಲಿಂಗಪ್ಪ ಬಸಪ್ಪ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ ವಿಶ್ವ ರೆಡ್ ಕ್ರಾಸ್ ದಿನ ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಸ್.ಪಿ. ಗೌಡರ ಮಾತನಾಡಿದರು.

ರೆಡ್ ಕ್ರಾಸ್ ಘಟಕದ ಸಂಚಾಲಕ ಡಾ. ನಾಗರಾಜ ಗೋಡಿಹಾಳ ಮಾತನಾಡಿ, ರಸ್ತೆ ಅಪಘಾತ, ಅಗ್ನಿ ಅವಘಡ ಸೇರಿದಂತೆ ಇತರೆ ಆಪತ್ತುಗಳಲ್ಲಿ ಸಿಲುಕಿಕೊಂಡವರನ್ನು ರಕ್ಷಿಸುವುದರೊಂದಿಗೆ, ಪ್ರಥಮ ಚಿಕಿತ್ಸೆ ಕೊಡುವ ಕೆಲಸ ಮೊದಲು ಮಾಡಬೇಕು. ಅದನ್ನು ಬಿಟ್ಟು ವಿಡಿಯೋ ಮಾಡಿ ವೈರಲ್ ಮಾಡುವಂತಹ ಕಾರ್ಯಕ್ಕೆ ಇಳಿಯಬೇಡಿ. ರೆಡ್ ಕ್ರಾಸ್ ಸಂಸ್ಥೆಯ ಧ್ಯೇಯಗಳನ್ನು ಈಡೇರಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ ಪ್ರಮುಖವಾಗಿದೆ ಎಂದರು. ಉಪನ್ಯಾಸಕ ಶಂಕ್ರಪ್ಪ ಹರಿಜನ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಐಕ್ಯೂಎಸಿ ಸಂಚಾಲಕ ಪ್ರೊ. ಬಸವರಾಜ ಹುಗ್ಗಿ, ಪ್ರಾಧ್ಯಾಪಕ ರೇವಣಸಿದ್ದಪ್ಪ ಕೆ.ಬಿ., ರವಿಕುಮಾರ ಎಸ್.ಯು. ಉಪಸ್ಥಿತರಿದ್ದರು. ಅಂಬಿಕಾ ಹೊಸಮನಿ, ರವಿ ಎಂ., ಶೋಭಾ ನಂದಿಹಳ್ಳ, ವೀರೇಶ ಷಡಕ್ಷರಿಮಠ, ಗಂಗವ್ವ ದಾನಪ್ಪನವರ, ಮೇಘನಾ ಮಾಂಗ್ ಸಾವಿತ್ರಮ್ಮ ಬಿ. ಮತ್ತಿತರರಿದ್ದರು.

ಸುದ್ದಿ ಸಿಂಚನ

ಹೋಂಸ್ಟೇ, ರೆಸಾರ್ಟ್‌ಗಳ ನೋಂದಣಿಗೆ ಸೂಚನೆ

ಹಾವೇರಿ: ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೋಂ ಸ್ಟೇ ಹಾಗೂ ರೆಸಾರ್ಟ್‌ಗಳ ಮಾಲೀಕರು ನಿಯಮದನ್ವಯ ಅಗತ್ಯ ದಾಖಲೆಗಳೊಂದಿಗೆ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ಹಾವೇರಿ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಅಗತ್ಯ ದಾಖಲೆಗಳಾದ ಗ್ರಾಮ ಪಂಚಾಯಿತಿ ನಿರಾಕ್ಷೇಪಣಾ ಪತ್ರ ಇ-ಖಾತಾ, ಪಹಣಿ, ಪೊಲೀಸ್ ನಿರಾಕ್ಷೇಪಣಾ ಪತ್ರ ವಾಸಸ್ಥಳ ದೃಢೀಕರಣ ಪತ್ರ, ಆಧಾರ್‌ಕಾರ್ಡ್, ಮಾಲೀಕರ ಭಾವಚಿತ್ರ ಮತ್ತು ಹೋಂಸ್ಟೇ ಯೋಜನೆಯ ಛಾಯಾಚಿತ್ರಗಳನ್ನು 15 ದಿನಗಳೊಳಗೆ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ''ಎ'' ಬ್ಲಾಕ್ ಎರಡನೇ ಮಹಡಿ ಜಿಲ್ಲಾಡಳಿತ ಭವನ, ದೇವಗಿರಿ, ಹಾವೇರಿ-581110 ಈ ವಿಳಾಸದಲ್ಲಿ ನೋಂದಣಿ ಮಾಡಿಕೊಳ್ಳಲು ಸೂಚಿಸಲಾಗಿದೆ. ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಹಾವೇರಿ ಅಥವಾ 08375-296033ನ್ನು ಸಂಪರ್ಕಿಸಿ.

ಬೇಸಿಗೆ ಬಿಸಿಲಿನ ತಾಪದಿಂದ ಉಷ್ಣಾಂಶ ಹೆಚ್ಚಳ: ಕ್ರಮಕ್ಕೆ ಸಲಹೆ

ಹಾವೇರಿ: ಬೇಸಿಗೆಯಲ್ಲಿ ಬಿಸಿಲಿನ ತಾಪದಿಂದ ಉಷ್ಣಾಂಶವು ಹೆಚ್ಚಾಗಿರುವುದರಿಂದ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ತಡೆಗೆ, ಸಾರ್ವಜನಿಕರು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಂ. ಜಯಾನಂದ ಅವರು ಸಲಹೆ ನೀಡಿದ್ದಾರೆ. ಬಿಸಿಲಿನಲ್ಲಿ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಅಥವಾ ಛತ್ರಿಯನ್ನು ಬಳಸಿ ಹಾಗೂ ಜತೆಯಲ್ಲಿ ಶುದ್ಧ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು. ಹಗುರವಾದ ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಬಳಸಿ. ಒಆರ್ ಎಸ್, ಎಳನೀರು ಮತ್ತು ಮನೆಯಲ್ಲಿ ತಯಾರಿಸಿದ ಲಸ್ಸಿ, ಶರಬತ್, ಹಣ್ಣಿನ ರಸ ಹಾಗೂ ಮಜ್ಜಿಗೆಯನ್ನು ಬಳಸಿರಿ. ಬಾಯಾರಿಕೆ ಇಲ್ಲದಿದ್ದರೂ ಸಾಕಷ್ಟು ಮತ್ತು ಸಾಧ್ಯವಾದಷ್ಟು ಹೆಚ್ಚು ಶುದ್ಧ ನೀರನ್ನು ಕುಡಿಯಬೇಕು. ಚಿಕ್ಕ ಮಕ್ಕಳು ಹಾಗೂ ವಯೋವೃದ್ಧರು ಮನೆಯಲ್ಲಿಯೇ ಇದ್ದು ವಿಶ್ರಾಂತಿ ಪಡೆಯಬೇಕು. ಬಿಸಿಯಾದ ಹಾಗೂ ಮಸಾಲೆಯುಕ್ತ ಆಹಾರವನ್ನು ಸೇವಿಸುವುದನ್ನು ಕಡಿಮೆ ಮಾಡಬೇಕು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಹಾಗೂ ಹಾನಿಕಾರಕ ತಂಪು ಪಾನೀಯಗಳನ್ನು ಸೇವಿಸಬಾರದು ಹಾಗೂ ಮನೆಯಿಂದ ಹೊರಗೆ ಹೋಗುವಾಗ ಕಡ್ಡಾಯವಾಗಿ ಪಾದರಕ್ಷೆಗಳನ್ನು ಬಳಸಬೇಕು.

ವೈದ್ಯರನ್ನು ಸಂಪರ್ಕಿಸಿ ಅಥವಾ 108/102ಕ್ಕೆ ಕರೆ ಮಾಡಿ: ಬಿಸಿಲಿನಲ್ಲಿರುವ ಯಾವುದೇ ವ್ಯಕ್ತಿ ಅಪಾಯದ ಚಿಹ್ನೆಗಳಾದ ತೊದಲು ಮಾತು, ಅರ್ಥರಹಿತವಾಗಿ ಬಡಬಡಿಸುವುದು, ಚರ್ಮ ಕೆಂಪಾಗುವುದು. ಬೆವರು ಕಡಿಮೆಯಾಗುವುದು, ದೇಹದ ಉಷ್ಣತೆ ಹೆಚ್ಚಾಗುವುದು, ದೀರ್ಘವಾದ ತೀವ್ರ ಉಸಿರಾಟವಿದ್ದಲ್ಲಿ ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿ, ಕೆಳಗೆ ಮಲಗಿಸಿ ದೇಹದ ಎಲ್ಲ ಭಾಗಗಳನ್ನು ಒದ್ದೆ ಬಟ್ಟೆಯಿಂದ ಒರೆಸಬೇಕು ಹಾಗೂ ಅಪಾಯದ ಚಿಹ್ನೆಗಳು ಮುಂದುವರಿದಲ್ಲಿ ಹತ್ತಿರದ ವೈದ್ಯರನ್ನು ಸಂಪರ್ಕಿಸಿ ಅಥವಾ 108/102ಕ್ಕೆ ಕರೆ ಮಾಡಬೇಕು. ಬಿಸಿಲಿನ ತಾಪದಿಂದ ಉಂಟಾಗುವ ದುಷ್ಪರಿಣಾಮಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ತಾಲೂಕು ಆಸ್ಪತ್ರೆಗಳು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಬೇಸಿಗೆಯಲ್ಲಿ ಬರಬಹುದಾದ ರೋಗಗಳ ಆರೈಕೆಗಾಗಿ ಒ.ಆರ್.ಎಸ್., ಐ.ವಿ. ಫ್ಲೂಯಿಡ್ಸ್ ಮತ್ತು ಜೀವ ರಕ್ಷಕ ಔಷಧಿಗಳು ಲಭ್ಯವಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿಗೆ ಅರ್ಜಿ ಆಹ್ವಾನ

ಹಾವೇರಿ: ದೇವಗಿರಿ ಬ್ಯಾಂಕ್ ಆಫ್ ಬರೋಡಾ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಮೇ 18ರಿಂದ 29ರ ವರೆಗೆ 12 ದಿನಗಳ ಉಚಿತ ಫಾಸ್ಟ್‌ಫುಡ್ ಸ್ಟಾಲ್ ಉದ್ಯಮಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಊಟ, ವಸತಿ ಸಹಿತ ತರಬೇತಿ ಉಚಿತವಾಗಿರುತ್ತದೆ. ಹಾವೇರಿ ಜಿಲ್ಲೆಯ ಗ್ರಾಮೀಣ ಭಾಗದ ರೇಷನ್ ಕಾರ್ಡ್ ಹೊಂದಿದವರಿಗೆ ಮಾತ್ರ ತರಬೇತಿಗೆ ಅವಕಾಶವಿದೆ. 18ರಿಂದ 50 ವಯೋಮಿತಿಯವರು ಮೇ 12ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ. 8660219375 ಸಂಪರ್ಕಿಸಲು ಕೋರಲಾಗಿದೆ.

2028ಕ್ಕೆ ಮತ್ತೆ ನಮ್ಮ ಸರ್ಕಾರ ಅಧಿಕಾರಕ್ಕೆ ಬರಲು ದಿಕ್ಸೂಚಿ

ಉಪಚುನಾವಣೆ ಫಲಿತಾಂಶ ಕುರಿತು ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ಇತ್ತೀಚೆಗೆ ನಡೆದ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪ ಚುನಾವಣೆಗಳಲ್ಲಿ ಜನರು ನಮಗೆ ಆಶೀರ್ವಾದ ಮಾಡಿದ್ದು, 2028ಕ್ಕೆ ರಾಜ್ಯದಲ್ಲಿ ಮತ್ತೆ ನಮ್ಮ ಸರ್ಕಾರ ಅಧಿಕಾರಕ್ಕೆ ಬರಲು ಇದು ದಿಕ್ಸೂಚಿಯಾಗಿದೆ ಎಂದು ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್ ಹೇಳಿದರು.

ಶುಕ್ರವಾರ ಸುದ್ದಿಗಾರರೊಂದಿಗೆ ಅವರು ಮಾತನಾಡಿದ ಅವರು, ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲುತ್ತದೆ. ಈ ಫಲಿತಾಂಶ ಮುಂದಿನ 2028ರ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದಿದ್ದರು. ಆದರೆ ರಾಜ್ಯದಲ್ಲಿ ನಡೆದ ಎಲ್ಲ ಉಪಚುನಾವಣೆಗಳಲ್ಲೂ ನಾವೇ ಗೆದ್ದಿದ್ದೇವೆ. ಅವರದೇ ಮಾತಿನಂತೆ ಈ ಫಲಿತಾಂಶ ಮುಂಬರುವ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ನಾಯಕತ್ವದ ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಗ್ಯಾರಂಟಿಗಳೇ ನಮ್ಮ ಗೆಲುವಿಗೆ ಶ್ರೀರಕ್ಷೆಯಾಗಿವೆ. ದಾವಣಗೆರೆಯಲ್ಲಿ ಕಾಂಗ್ರೆಸ್ ಗೆಲ್ಲಿಸಲು ನಮಗೆ ಜವಾಬ್ದಾರಿ ಕೊಟ್ಟಿದ್ದರು. ಆ ಕೆಲಸವನ್ನು ನಾವು ಮಾಡಿದ್ದೇವೆ. ದಾವಣಗೆರೆಯಲ್ಲಿ 35 ಸಾವಿರ ಅಲ್ಪಸಂಖ್ಯಾತರು ಕಾಂಗ್ರೆಸ್‌ಗೆ ವೋಟು ಹಾಕಿದ್ದು, ಅಲ್ಪಸಂಖ್ಯಾತರ ಜತೆಗೆ ಎಲ್ಲ ಸಮುದಾಯದ ಮತದಾರರು ನಮಗೆ ವೋಟು ಹಾಕಿದ್ದಾರೆ. 2028ರಲ್ಲಿ ಮತ್ತೆ ನಾವೇ ನಾವೇ ಅಧಿಕಾರಕ್ಕೆ ಬರುತ್ತೇವೆ ಎಂದರು.

ಗ್ಯಾರಂಟಿಗಳನ್ನು ಟೀಕಿಸುವ ಬಿಜೆಪಿಯವರು ಸಂಪೂರ್ಣ ಗ್ಯಾರಂಟಿಗಳನ್ನು ನಿಲ್ಲಿಸಿ ಎಂದು ಹೇಳಲಿ ನೋಡೋಣ ಎಂದು ಸವಾಲು ಹಾಕಿದ ಸಲೀಂ, ರಾಜ್ಯದಲ್ಲಿ ಗ್ಯಾರಂಟಿಗಳ ಜತೆಗೆ ಅಭಿವೃದ್ಧಿ ಆಗುತ್ತಿದೆ. ಮುಂದೆಯೂ ರಾಜ್ಯದ ಜನರು ನಮ್ಮ ಕೈ ಹಿಡಿಯುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಬಹುಮತವನ್ನು ರಾಜಭವನದಲ್ಲಿ ಸಾಬೀತು ಪಡಿಸಬೇಕಿಲ್ಲ, ಚುನಾವಣೆಯಲ್ಲಿ ಗೆದ್ದಿರುವ ದೊಡ್ಡ ಪಕ್ಷವನ್ನು ಕರೆದು ಸರ್ಕಾರ ರಚಿಸಲು ಅವಕಾಶ ಕೊಟ್ಟು, ವಿಧಾನಸಭೆಯಲ್ಲಿ ಬಹುಮತ ಸಾಬೀತು ಪಡಿಸಲು ಅವಕಾಶ ನೀಡಬೇಕು ಎಂದು ಸುಪ್ರೀಂಕೋರ್ಟ್ ಹಲವು ಪ್ರಕರಣಗಳಲ್ಲಿ ತೀರ್ಪು ನೀಡಿದೆ. ಆ ಪ್ರಕಾರ ತಮಿಳುನಾಡು ರಾಜ್ಯಪಾಲರು ನಡೆದುಕೊಳ್ಳಬೇಕು.

• **ಸಲೀಂ ಅಹ್ಮದ್** ವಿಪ ಮುಖ್ಯಸಚೇತಕರು

ಷಡ್ಯಂತ್ರ ಮಾಡಿ ಗೆಲುವು: 2023ರ ಚುನಾವಣೆಯಲ್ಲಿ ಶೃಂಗೇರಿ ಕ್ಷೇತ್ರದಲ್ಲಿ ನಾವು ಗೆದ್ದಿದ್ದೆವು. ಆದರೆ ಷಡ್ಯಂತ್ರ ಮಾಡಿ ಈಗ ಬಿಜೆಪಿ ಗೆಲ್ಲಿಸಿದ್ದಾರೆ. ಮರು ಎಣಿಕೆ ಮಾಡಲು ಕೋರ್ಟ್ ಆದೇಶಿಸಿತ್ತು. ಮತ ಎಣಿಕೆ ಮಾಡಿ ಕೋರ್ಟ್‌ಗೆ ಫಲಿತಾಂಶ ನೀಡಬೇಕಿತ್ತು. ಆದರೆ, ಬಹಿರಂಗವಾಗಿ ಫಲಿತಾಂಶ ಘೋಷಣೆ ಮಾಡಿದ್ದಾರೆ. ಈ ಬಗ್ಗೆ ನಾವು ಕಾನೂನು ಹೋರಾಟ ಮಾಡುತ್ತೇವೆ. ಬ್ಯಾಲೆಟ್ ಪೇಪರ್ ತಿದ್ದಿ ಸೋತವರನ್ನು ಗೆಲ್ಲಿಸಿದ್ದು, ಬಿಜೆಪಿ ವೋಟು ಚೋರಿ ಪಾರ್ಟಿ ಎಂದು ಟೀಕಿಸಿದರು.

ಬೆಂಗಳೂರು ಸೆಂಟ್ರಲ್‌ನಲ್ಲಿ ಮತ ಕಳ್ಳತನ ಮಾಡಿರುವುದನ್ನು ನಾವು ತೋರಿಸಿದ್ದೆವು. ಮತ ಎಣಿಕೆ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾಗಳಿರುತ್ತವೆ. ಅವುಗಳನ್ನು ತೆಗೆದು ನೋಡಬೇಕು. ಷಡ್ಯಂತ್ರ ಮಾಡಿ ಬಿಜೆಪಿ ಗೆಲ್ಲಿಸಿದ್ದಾರೆ ಎಂದು ದೂರಿದರು.

ರಾಜ್ಯಪಾಲರಿಂದ ರಾಜಕೀಯ: ತಮಿಳುನಾಡಿನಲ್ಲಿ ದೊಡ್ಡಪಕ್ಷವಾಗಿ ಹೊರ ಹೊಮ್ಮಿರುವ ವಿಜಯ್ ಅವರಿಗೆ ಸರ್ಕಾರ ಅವಕಾಶ ನೀಡದೇ ರಾಜ್ಯಪಾಲರು ರಾಜಕಾರಣ ಮಾಡಿ ಅತಂತ್ರ ಮಾಡಿದ್ದಾರೆ. ರಾಜ್ಯಪಾಲರು ದೊಡ್ಡ ಪಕ್ಷವನ್ನು ಕರೆದು ಬಹುಮತ ಸಾಬೀತಿಗೆ ಅವಕಾಶ ಕೊಡಬೇಕಿತ್ತು. ಆದರೆ, ಅವರು ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿದ್ದಾರೆ. ವಿಧಾನಸಭೆಯಲ್ಲಿ ಬಹುಮತ ಸಾಬೀತಿಗೆ ಅವಕಾಶ ಕೊಡದೆ ವಿನಾಕಾರಣ ವಿಳಂಬ ಮಾಡುತ್ತಿದ್ದಾರೆ. ರಾಜ್ಯಪಾಲರ ಕೆಲಸ ರಾಜಕೀಯ ಪ್ರೇರಿತವಾಗಿದೆ. ವಿಜಯ ಅವರನ್ನು ಸಿಎಂ ಮಾಡಬಾರದು ಎಂಬುದು ಕೇಂದ್ರ ಸರ್ಕಾರದ ಷಡ್ಯಂತ್ರ ಎಂದು ಕಿಡಿಕಾರಿದರು.

ಸಂಪುಟ ಪುನಾರಚನೆ: ಬಹುಶಃ ಈ ತಿಂಗಳಲ್ಲಿ ಸಂಪುಟ ಪುನಾರಚನೆ ಆಗಬಹುದು. ಸಿಎಂ, ಡಿಸಿಎಂ ಸೇರಿದಂತೆ ಹೈಕಮಾಂಡ್ ನಾಯಕರು ಸೇರಿ ಅಂತಿಮ ತೀರ್ಮಾನ ಮಾಡುತ್ತಾರೆ. ಆದಷ್ಟು ಬೇಗ ಸಚಿವ ಸಂಪುಟ ಪುನಾರಚನೆ ಆಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯ ಶ್ಲಾಘನೀಯ

ರೆಡ್‌ಕ್ರಾಸ್ ದಿನಾಚರಣೆ ಕಾರ್ಯಕ್ರಮದಲ್ಲಿ ಶ್ರೀಶೈಲಜಾ



ಹಾವೇರಿ ನಗರದ ಸಿಂದಗಿ ಶಾಂತವೀರೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ್ದ ವಿಶ್ವ ರೆಡ್‌ಕ್ರಾಸ್ ದಿನಾಚರಣೆ ಕಾರ್ಯಕ್ರಮವನ್ನು ಹಿರಿಯ ದಿವಾಣಿ ನ್ಯಾಯಾಧೀಶರಾದ ಶ್ರೀಶೈಲಜಾ ಎಚ್.ವಿ. ಅವರು ಉದ್ಘಾಟಿಸಿದರು.

• **ಕನ್ನಡಪ್ರಭ ವಾರ್ತೆ** ಹಾವೇರಿ

ಸಂಕಷ್ಟಕರ ಹಾಗೂ ಸಂದಿಗ್ಧ ಪರಿಸ್ಥಿತಿಯಲ್ಲಿ ಸೇವಾ ಕಾರ್ಯ ಮಾಡುವ ಗುರಿ ಉದ್ದೇಶ ಹೊಂದಿರುವ ರೆಡ್‌ಕ್ರಾಸ್ ಸಂಸ್ಥೆಯ ಕಾರ್ಯ ಶ್ಲಾಘನೀಯ ಎಂದು ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀಶೈಲಜಾ ಎಚ್.ವಿ. ಅವರು ಹೇಳಿದರು.

ನಗರದ ಸಿಂದಗಿ ಶಾಂತವೀರೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಡಾ. ತೋಂಟದ ಶ್ರೀ ಸಿದ್ದಲಿಂಗ ಮಹಾಸ್ವಾಮಿಗಳವರ ಸಭಾಂಗಣದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಹಾವೇರಿ ಜಿಲ್ಲಾ ಶಾಖೆ ಹಾಗೂ ಸಿಂದಗಿ ಶಾಂತವೀರೇಶ್ವರ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಸಹಯೋಗದಲ್ಲಿ ಆಯೋಜಿಸಲಾದ ಜೀನ್ ಹೆನ್ರಿ ಡ್ಯೂನಾಂಟ್ ರವರ ಜನ್ಮದಿನ-ವಿಶ್ವರೆಡ್ ಕ್ರಾಸ್ ದಿನಾಚಾರಣೆ, ವೈಆರ್‌ಸಿ ಘಟಕ ಸ್ಥಾಪನೆ ಹಾಗೂ ವೈಆರ್‌ಸಿ ಮತ್ತು ಜೆಆರ್‌ಸಿ ಮಾರ್ಗಸೂಚಿ ಕೈಪಿಡಿ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವೀಯ ತತ್ವದಡಿ ಯುದ್ಧ, ವಿಕೋಪ ಹಾಗೂ ತುರ್ತು ಪರಿಸ್ಥಿತಿಯಲ್ಲಿ ಮತ್ತು ಆರೋಗ್ಯಕರ ಜನರ ಸೇವೆ ಮಾಡುವ ಕೆಲಸವನ್ನು ರೆಡ್ ಕ್ರಾಸ್ ಮಾಡುತ್ತಿದೆ. ಕೋವಿಡ್, ಅತಿವೃಷ್ಟಿ ನೆರೆ ಹಾವಳಿ ಸಂದರ್ಭದಲ್ಲಿ ರೆಡ್ ಕ್ರಾಸ್ ಸ್ವಯಂಸೇವಕರಾಗಿಕೆಲಸಮಾಡಿರುವುದನ್ನು ನೋಡಲಾಗಿದ್ದು, ವಿದ್ಯಾರ್ಥಿಗಳು ಯುವ ಜನರು ರೆಡ್ ಕ್ರಾಸ್ ಸಂಸ್ಥೆಯ ಮೂಲಕ ಸೇವಾ ಮನೋಭಾವನೆ ಬೆಳಿಸಿಕೊಳ್ಳ ಬೇಕಾಗಿದೆ. ರೆಡ್ ಕ್ರಾಸ್ ಮೂಲಕ ಆರೋಗ್ಯ ಜಾಗೃತಿ ಹಾಗೂ ಕಾನೂನು ಜಾಗೃತಿ ಅರಿವು ಮೂಡಿಸುವ ಕಾರ್ಯಕ್ರಮಗಳು ಹೆಚ್ಚಾಗ್ಗಲಿ. ಎಲ್ಲರಿಗೂ ನ್ಯಾಯ ಒದಗಿಸುವ ಕೆಲಸಕ್ಕೆ ಕಾನೂನು ಅರಿವು ಬಹಳ ಮುಖ್ಯವಾಗಿದೆ. ಸಮಾಜದಲ್ಲಿ ಆರೋಗ್ಯಕರ ವಾತಾವರಣ ಮೂಡಿಸುವ ಕಾರ್ಯಕ್ರಮಗಳನ್ನು ರೆಡ್ ಕ್ರಾಸ್ ಸಂಸ್ಥೆ ಮಾಡಲಿ ಎಂದು ಹೇಳಿದರು.

ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಗೌರವ ಕಾರ್ಯಾಧ್ಯಕ್ಷ ಸಂಜೀವಕುಮಾರ ನೀರಲಗಿ ವೈಆರ್‌ಸಿ ಘಟಕ ಉದ್ಘಾಟಿಸಿ, ವೈಆರ್‌ಸಿ ಮತ್ತು ಜೆಆರ್‌ಸಿ ಮಾರ್ಗಸೂಚಿ ಕೈಪಿಡಿ ವಿತರಿಸಿ ಮಾತನಾಡಿದ ಅವರು, ಜೀನ್ ಹೆನ್ರಿ ಡ್ಯೂನಾಂಟ್ ಅವರು ರೆಡ್ ಕ್ರಾಸ್ ಸಂಸ್ಥೆಯನ್ನು 1863ರಲ್ಲಿ ಸ್ಥಾಪಿಸಿದ್ದು, ಸಂದಿಗ್ಧ ಸನ್ನಿವೇಶದಲ್ಲಿ ಇರುವ ಜನರಿಗೆ ಸೇವಾ ಗುಣಗಳ ಮೂಲಕ ಜಿಲ್ಲೆಯಲ್ಲಿ ಕೆಲಸ ಮಾಡುತ್ತಿದ್ದೇವೆ. ಮನುಷ್ಯ ಇರುವಾಗ ಏನಾದರೂ ಸಮಾಜಕ್ಕೆ ಸೇವೆ ಸಲ್ಲಿಸಬೇಕು. ಬ್ಲಡ್ ಬ್ಯಾಂಕ್ ಮಾಡುವ ಗುರಿಯನ್ನು ಹೊಂದಿದ್ದು, ಇನ್ನೂ 6 ತಿಂಗಳ ಒಳಗಾಗಿ ಬ್ಲಡ್ ಬ್ಯಾಂಕ್ ಕಟ್ಟಡ ಮುಗಿಸಬೇಕಾಗಿದೆ. ಎಲ್ಲರ ಸಹಕಾರದಿಂದ ಮುನ್ನಡೆಯೋಣ. ಎಲ್ಲಾ ಶಾಲಾ ಕಾಲೇಜುಗಳಲ್ಲಿ ಘಟಕ ಸ್ಥಾಪನೆ ಮಾಡಲಾಗುವುದು. ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವನೆ ಬೆಳೆಸುವುದು ಅಗತ್ಯವಾಗಿದೆ ಎಂದರು.

ವಿದ್ಯಾರ್ಥಿಗಳು, ಯುವ ಜನರು ರೆಡ್ ಕ್ರಾಸ್ ಸಂಸ್ಥೆಯ ಮೂಲಕ ಸೇವಾ ಮನೋಭಾವನೆ ಬೆಳೆಸಿಕೊಳ್ಳಬೇಕಾಗಿದೆ. ರೆಡ್ ಕ್ರಾಸ್ ಮೂಲಕ ಆರೋಗ್ಯ ಜಾಗೃತಿ ಹಾಗೂ ಕಾನೂನು ಜಾಗೃತಿ ಅರಿವು ಮೂಡಿಸುವ ಕಾರ್ಯಕ್ರಮಗಳು ಹೆಚ್ಚಾಗಲಿ. ಎಲ್ಲರಿಗೂ ನ್ಯಾಯ ಒದಗಿಸುವ ಕೆಲಸಕ್ಕೆ ಕಾನೂನು ಅರಿವು ಬಹಳ ಮುಖ್ಯವಾಗಿದೆ. ಸಮಾಜದಲ್ಲಿ ಆರೋಗ್ಯಕರ ವಾತಾವರಣ ಮೂಡಿಸುವ ಕಾರ್ಯಕ್ರಮಗಳನ್ನು ರೆಡ್ ಕ್ರಾಸ್ ಸಂಸ್ಥೆ ಮಾಡಬೇಕು.

• **ಶ್ರೀಶೈಲಜಾ ಎಚ್.ವಿ.,** ಹಿರಿಯ ದಿವಾಣಿ ನ್ಯಾಯಾಧೀಶರು

ಅಧ್ಯಕ್ಷತೆ ವಹಿಸಿದ್ದ ಸಿಂದಗಿ ಶಾಂತವೀರೇಶ್ವರ ಆಯುರ್ವೇದ ವೈದಕೀಯ ಮಹಾವಿದ್ಯಾಲಯದ ಆಡಳಿತಾಧಿಕಾರಿ ವಿ.ಎಚ್.ಕೆ. ಹಿರೇಮಠ ಮಾತನಾಡಿ, ಸಮಾಜದಲ್ಲಿ ವೈದ್ಯರಾಗುವವರು ಸೇವಾ ಮನೋಭಾವನೆ ಹೊಂದಬೇಕಾಗಿದೆ. ಸಮಾಜಕ್ಕೆ ನಮ್ಮದೆಯಾದ ಸೇವೆ ಸಲ್ಲಿಸಿದರೆ ಬದುಕು ಸಾರ್ಥಕವಾಗಲಿದೆ ಎಂದು ಹೇಳಿದರು.

ಇದೇವೇಳೆವೈಆರ್‌ಸಿಪ್ರೋಗ್ರಾಮಿಂಗ್ ಆಫೀಸರ್‌ಗಳಾದ ಡಾ.ಸಂಗಮೇಶ ದೊಡ್ಡಗೌಡರ, ದೇವರಾಜ ಕುಂಬಾರ, ಡಾ.ಅಶ್ವಿನಿ ಹತ್ತಿಕಾಳ ಇನ್ನಿತರರಿಗೆ ವೈಆರ್‌ಸಿ-ಜೆಆರ್‌ಸಿ ಕೈಪಿಡಿಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ರೆಡ್ ಕ್ರಾಸ್ ರಾಜ್ಯ ಸಮಿತಿ ಸದಸ್ಯರಾದ ರವಿ ಮೆಣಸಿನಕಾಯಿ, ಖಜಾಂಚಿ ಪ್ರಭು ಹಿಟ್ನಳ್ಳಿ, ಸಹಕಾರ್ಯದರ್ಶಿ ಡಾ.ಪ್ರದೀಪ ದೊಡ್ಡಗೌಡ್ರ, ಸಿದ್ದರಾಜ ಕಲಕೋಟಿ, ಎಸ್‌ಸಿ ಹಿರೇಮಠ, ಉಡಚಪ್ಪ ಮಾಳಗಿ, ವಿಜಯಕುಮಾರ ಚಿನ್ನಿಕಟ್ಟಿ, ಶಂಕರ ಮೇಹರವಾಡೆ, ಪೂರ್ಣಿಮಾ ಮಠದ, ಡಾ.ಅಂಕಿತ ಆನಂದ, ಡಾ.ದಯಾನಂದ ಸುತ್ತಕೋಟಿ, ಡಾ.ಜಿ.ಎಸ್ ಭಟ್, ಡಾ.ಕಲ್ಲನಗೌಡ ಇತರರು ಉಪಸ್ಥಿತರಿದ್ದರು.

ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಗೌರವ ಕಾರ್ಯದರ್ಶಿ ನಿಂಗಪ್ಪ ಆರೇರ ಪ್ರಾಸ್ತವಿಕವಾಗಿ ಮಾತನಾಡಿದರು. ಕಾಲೇಜಿನ ಪ್ರಾಚಾರ್ಯ ಡಾ.ಸಿ.ಎನ್. ಗೌಡರ ಸ್ವಾಗತಿಸಿ, ರೆಡ್ ಕ್ರಾಸ್ ನೋಂದಣಿ ಪತ್ರ ಸ್ವೀಕರಿಸಿದರು.

25ರಂದು ಕರುನಾಡ ಕನ್ನಡ ಸಾಹಿತ್ಯ ಬಳಗದಿಂದ ಸಮ್ಮೇಳನ



ಕರುನಾಡ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗದ 2ನೇ ರಾಜ್ಯಮಟ್ಟದ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ನೇಮಕಗೊಂಡಿರುವ ಜಿ.ಎಂ.ಓಂಕಾರಣ್ಣನವರ ಅವರಿಗೆ ಆಹ್ವಾನ ನೀಡಲಾಯಿತು.

• **ಕನ್ನಡಪ್ರಭ ವಾರ್ತೆ** ಹಾವೇರಿ

ನಗರದ ಡಾ.ಬಿ.ಆರ್. ಅಂಬೇಡ್ಕರ್‌ಸಭಾ ಭವನದಲ್ಲಿ ಕರುನಾಡ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗ ವತಿಯಿಂದ ಮೇ 25ರಂದು ಜರುಗುವ 2ನೇ ರಾಜ್ಯಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ನಿಯೋಜಿತರಾದ ಸಾಹಿತಿ, ಶಿಕ್ಷಕ ಜಿ.ಎಂ. ಓಂಕಾರಣ್ಣನವರ ಅವರನ್ನು ಅಧಿಕೃತವಾಗಿ ಆಹ್ವಾನಿಸಲಾಯಿತು.

ಬಳಗದ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಸ್.ಡಿ. ಮುಡೆಣ್ಣವರ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಕರುನಾಡ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗ ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಹಾಗೂ ಯುವ ಪೀಳಿಗೆಗೆ ಕನ್ನಡ ಜಾಗೃತಿ ಮೂಡಿಸುವ ಕಾರ್ಯ ಮಾಡುತ್ತಿದೆ. ಹಾವೇರಿ ನಗರದಲ್ಲಿ ಈ ಬಾರಿ ನಡೆಯುವ 2ನೇ ರಾಜ್ಯಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಜಿ.ಎಂ. ಓಂಕಾರಣ್ಣನವರ ಅವರನ್ನು ಆಯ್ಕೆ ಮಾಡಲಾಗಿದೆ. ಸಮ್ಮೇಳನದ ದಿನ ಸರ್ವಾಧ್ಯಕ್ಷರ ಮೆರವಣಿಗೆ, ವಿವಿಧ ಗೋಷ್ಠಿಗಳು ಹಾಗೂ ವಿವಿಧ ರಂಗಗಳಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ಸನ್ಮಾನ ಜರುಗಲಿದೆ ಎಂದರು. ಸಮ್ಮೇಳನದ ಆಹ್ವಾನ ಸ್ವೀಕರಿಸಿ ಮಾತನಾಡಿದ ಜಿ.ಎಂ. ಓಂಕಾರಣ್ಣನವರ, ನಾನು ಶಿಕ್ಷಕ ವೃತ್ತಿಯಲ್ಲಿದ್ದು ಸಾಹಿತ್ಯಿಕವಾಗಿ 28 ಕೃತಿಗಳನ್ನು ರಚಿಸಿರುವೆ. ನಾಡು ನುಡಿ ಸೇವೆ ಪರಿಗಣಿಸಿ ನನ್ನನ್ನು ಅಧ್ಯಕ್ಷರನ್ನಾಗಿ ನೇಮಿಸಿರುವುದು ಸಂತಸ ಮೂಡಿಸಿದೆ ಎಂದರು. ಸಾಹಿತಿ ಡಾ. ಸತೀಶ ಕುಲಕರ್ಣಿ, ಎಸ್.ಆರ್. ಹಿರೇಮಠ, ಕರುನಾಡ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗದ ಎಸ್.ಫಕ್ಕೀರಪ್ಪ, ಸಂಗಪ್ಪ ಕೋಳೂರ, ಎಸ್.ಬಿ. ಹೂಗಾರ, ಮುತ್ತುರಾಜ ಮಾದರ, ಮುಖಂಡರಾದ ಉಡಚಪ್ಪ ಮಾಳಗಿ, ಸಂಜಯಗಾಂಧಿ ಸಂಜೀವಣ್ಣನವರ, ದುರ್ಗಪ್ಪ ಮುಡೆಣ್ಣವರ, ನಿಂಗಪ್ಪ ಆರೇರ, ಸುಮಂಗಲಾ ಓಂಕಾರಣ್ಣನವರ ಇದ್ದರು.

ಜ್ಯೋತಿಷ್ಯ ಪಾಠಶಾಲೆಗೆ ಪ್ರವೇಶ ಪ್ರಾರಂಭ

ಬಂಕಾಪುರ: ಸಮೀಪದ ಬಿಸನಳ್ಳಿ ಗ್ರಾಮದ ಶ್ರೀ ಜಗದ್ಗುರು ಪಂಚಾಚಾರ್ಯ ವೇದ, ಆಗಮ, ಸಂಸ್ಕೃತ, ಸಂಗೀತ, ಯೋಗಮತ್ತು ಜ್ಯೋತಿಷ್ಯ ಪಾಠಶಾಲೆಯಲ್ಲಿ 3 ವರ್ಷಗಳ ಕಾಲ ವೇದ, ಆಗಮ, ಸಂಸ್ಕೃತ, ಸಂಗೀತ, ಯೋಗ ಮತ್ತು ಜ್ಯೋತಿಷ್ಯ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ ಪ್ರವೇಶಗಳು ಪ್ರಾರಂಭವಾಗಿದ್ದು, ಮೇ 1ರಿಂದ 15ರ ವರೆಗೆ ಹೆಸರು ನೋಂದಾಯಿಸಿಕೊಳ್ಳಲಾಗುವುದು. ಕೇವಲ50 ವಿದ್ಯಾರ್ಥಿಗಳನ್ನು ಸಂದರ್ಶನ ಮೂಲಕ ಆಯ್ಕೆ ಮಾಡಿಕೊಳ್ಳಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಶ್ರೀಮಠದಲ್ಲಿ 3 ವರ್ಷಗಳ ಕಾಲ ವೇದ, ಆಗಮ, ಸಂಸ್ಕೃತ, ಸಂಗೀತ, ಯೋಗಮತ್ತು ಜ್ಯೋತಿಷ್ಯ ಕಲಿಸಲಾಗುತ್ತದೆ. ವಿಶೇಷವಾಗಿ ಕಂಪ್ಯೂಟರ್‌ಕ್ಲಾಸ್ ಕೂಡ ಇರಲಿದೆ.

10ನೇ ತರಗತಿಯಲ್ಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಠದಲ್ಲಿ ವಿಶೇಷ ಸೌಲಭ್ಯಗಳನ್ನು ಒದಗಿಸಿಕೊಡಲಾಗುತ್ತದೆ. ಮೇ 18ರಂದು ಬೆಳಗ್ಗೆ 11 ಗಂಟೆಗೆ ವಿದ್ಯಾರ್ಥಿಗಳಿಗೆ ಮಠದಲ್ಲಿ ನೇರ ಸಂದರ್ಶನವಿರುವುದು. ಸಂದರ್ಶನದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಾತ್ರ ಪಾಠಶಾಲೆಗೆ ಪ್ರವೇಶ ನೀಡಲಾಗುವುದು. ಮಾಹಿತಿಗಾಗಿ ಮೊಬೈಲ್ 8088968655, 8431378365, 8495920018 ಸಂಪರ್ಕಿಸಬಹುದು.


ತತ್ವಪದ ವಿಮರ್ಶಾ ಲೇಖನ ಸ್ಪರ್ಧೆ

ಹಾವೇರಿ: ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ರಾಜ್ಯಮಟ್ಟದ ತತ್ವಪದ ವಿಮರ್ಶಾ ಲೇಖನ ಸ್ಪರ್ಧೆಯನ್ನು ಏರ್ಪಡಿಸಲು ಉದ್ದೇಶಿಸಿದೆ. 18ರಿಂದ 40 ವರ್ಷ ವಯೋಮಿತಿಯುಳ್ಳವರು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಸ್ಪರ್ಧೆಗೆ ಅಧ್ಯಯನ ಕೇಂದ್ರವು ನೀಡಿರುವ ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯವನ್ನು ಆಯ್ಕೆ ಮಾಡಿ ವಿಮರ್ಶಾ ಲೇಖನವನ್ನು ರಚಿಸಿ ಸ್ಪರ್ಧೆಗೆ ಆಹ್ವಾನ ನೀಡಿದ ಜೂ. 5ರೊಳಗಾಗಿ ಭಾಗವಹಿಸುವ ಸ್ಪರ್ಧಿಯು ಅರ್ಜಿ ಮತ್ತು ವಿಮರ್ಶಾ ಲೇಖನವನ್ನು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು-560056 ಈ ವಿಳಾಸಕ್ಕೆ ಕಳುಹಿಸಿಕೊಡಬೇಕು. ಅರ್ಜಿಯನ್ನು ಮತ್ತು ಲೇಖನವನ್ನು ಅಂಚೆ/ಕೊರಿಯರ್/ಇಮೇಲ್ ಅಥವಾ ಖುದ್ದಾಗಿ ಸಲ್ಲಿಸಬಹುದು. ಮಾಹಿತಿಗಾಗಿ 9743545865 ಗೆ ಸಂಪರ್ಕಿಸಿ.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಹಿರೇಕೆರೂರು: ಎಸ್ಸೆಸ್ಸೆಲ್ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ ಹಿರೇಕೆರೂರು ತಾಲೂಕಿನ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಪುರಸ್ಕರಿಸಲಾಗುತ್ತಿದ್ದು, ಆಸಕ್ತ ವಿದ್ಯಾಥಿಗಳು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬೇಕು ಎಂದು ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ಮೇಘರಾಜ ಮಾಳಗಿಮನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ವಿಜಯ ಮಾಳಗಿ



• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಪಟ್ಟಣದ ಗಾಂಧಿನಗರದ ಬಿಜೆಪಿ ಬೆಂಬಲಿತ ವಿಜಯ ಮಾಳಗಿ ಅವಿರೋಧವಾಗಿ ಆಯ್ಕೆಯಾದರು.

ಹಿಂದಿನ ಅಧ್ಯಕ್ಷ ಶಿವಯೋಗಿ ಉಕ್ಕುಂದ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಶುಕ್ರವಾರ ಚುನಾವಣೆ ಘೋಷಣೆ ಯಾಗಿತ್ತು. ಪಟ್ಟಣದ ಬ್ಯಾಂಕ್ ಆವರಣದಲ್ಲಿ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ವಿಜಯ ಮಾಳಗಿ ಹೊರತುಪಡಿಸಿ ಮತ್ಯಾರು ನಾಮಪತ್ರ ಸಲ್ಲಿಸದ ಹಿನ್ನೆಲೆಯಲ್ಲಿ ವಿಜಯ ಮಾಳಗಿ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನ ಅಧ್ಯಕ್ಷ ವಿಜಯಗೆ ಸನ್ಮಾನಿಸಿದ ಮಾಜಿ ಶಾಸಕ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ವಿರೂಪಾಕ್ಷಪ್ಪ ಬಳ್ಳಾರಿ ಮಾತನಾಡಿ, ಸಹಕಾರಿ ಬ್ಯಾಂಕ್‌ಗಳ ಸರ್ವತೋಮುಖ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಎಲ್ಲರ ಕೊಡುಗೆ ಅತ್ಯವಶ್ಯ, ಈ ಹಿನ್ನೆಲೆಯಲ್ಲಿ ಬ್ಯಾಂಕ್‌ನ ಎಲ್ಲ ಸದಸ್ಯರ ಸಹಕಾರ ಪಡೆದು ಬ್ಯಾಂಕ್ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುವಂತೆ ಸಲಹೆ ನೀಡಿದರು.

ಗಣ್ಯರಿಂದ ಸನ್ಮಾನ: ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಅವರನ್ನು ಬಿಜೆಪಿ ತಾಲೂಕಾಧ್ಯಕ್ಷ ನಿಂಗಪ್ಪ ಬಟ್ಟಲಕಟ್ಟಿ, ಮಾಜಿ ಅಧ್ಯಕ್ಷ ಶಿವಯೋಗಿ ಉಕ್ಕುಂದ, ಶಂಕ್ರಣ್ಣ ಮಾತನವರ, ಪುರಸಭೆ ಮಾಜಿ ಉಪಾಧ್ಯಕ್ಷ ಸುಭಾಸ ಮಾಳಗಿ, ಚಂದ್ರಣ್ಣ ಶೆಟ್ಟರ, ಶಿವಬಸಪ್ಪ ಕುಳೇನೂರ, ಸುರೇಶ ಯತ್ನಳ್ಳಿ, ಪರುಶರಾಮ ಉಜನಿಕೊಪ್ಪ, ಮಾರುತಿ ಪಾಸಿ, ನಾಗರಾಜ ಹಾವನೂರ, ಮಂಜುನಾಥ ಮಾಳಗಿ, ಸಂಕೇತಗೌಡ ಪಾಟೀಲ, ಸಿದ್ದಲಿಂಗಪ್ಪ ಪಟ್ಟಣಶೆಟ್ಟಿ, ಗಣೇಶಪ್ಪ ತಳ್ಳಳ್ಳಿ, ಲತಾ ಚಿಕ್ಕಣಜಿ, ಸಂಜೀವ ಕುಲಮಿ, ಬಸವರಾಜ ಮುಚ್ಚಟ್ಟಿ ಉಪಸ್ಥಿತರಿದ್ದರು.

ಕಬಡ್ಡಿ ಕ್ರೀಡಾಪಟುವಿಗೊಲಿದ ಅಧ್ಯಕ್ಷ ಸ್ಥಾನ: ವಿಜಯಕುಮಾರ ಮಾಳಗಿ ಮೂಲತಃ ರಾಷ್ಟ್ರಮಟ್ಟದ ಕಬಡ್ಡಿ ಕ್ರೀಡಾಪಟುವಾಗಿದ್ದು ಇದೀಗ ಅಧ್ಯಕ್ಷ ಸ್ಥಾನ ಗಿಟ್ಟಿಸಿಕೊಂಡಿದ್ದಾರೆ, ಸದರಿ ಪಟ್ಟಕ್ಕೇರಿದ ಮೊದಲ ಕಬಡ್ಡಿ ಕ್ರೀಡಾಪಟು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದಾರೆ.

ಮಕ್ಕಳನ್ನು ಪ್ರೋತ್ಸಾಹಿಸಿ | ಗ್ರಾಮೀಣ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಉನ್ನತಿ, ಶೈಕ್ಷಣಿಕ, ಔದ್ಯೋಗಿಕ ತರಬೇತಿ

ಶೈಕ್ಷಣಿಕ ಕ್ಷೇತ್ರದಲ್ಲಿ ಪರಿವರ್ತನ ಕಲಿಕಾ ಕೇಂದ್ರ ಮಾದರಿ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಗ್ರಾಮೀಣ ಮಕ್ಕಳ ಶೈಕ್ಷಣಿಕ ಉನ್ನತಿಗೆ ಸಂಕಲ್ಪಿಸಿ ಶೈಕ್ಷಣಿಕ, ಔದ್ಯೋಗಿಕ ತರಬೇತಿ ಒಳಗೊಂಡು, ಶಾಲಾ ಮಟ್ಟದಿಂದ ವಿಶ್ವವಿದ್ಯಾಲಯದ ವರೆಗಿನ ಸಾಧಕ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಗದು ಪ್ರೋತ್ಸಾಹದೊಂದಿಗೆ ಹೃದಯಸ್ಪರ್ಶಿ ಸಮಾರಂಭಕ್ಕೆ ಶಾಸಕ ಶ್ರೀನಿವಾಸ ಮಾನೆ ಅವರ ಮಹಾಪೋಷಕತ್ವದ ಪರಿವರ್ತನ ಕಲಿಕಾ ಕೇಂದ್ರ ಸಾಕ್ಷಿಯಾಗುತ್ತಿದೆ.

ಸಂಸ್ಥೆ ವಿದ್ಯಾರ್ಥಿಗಳ ಜ್ಞಾನದಾಹಕ್ಕೆ ನೀರೆರೆದು ಪೋಷಿಸುವ ಸಂಕಲ್ಪ ಕೈಗೂಡಿದ್ದು, ಶೈಕ್ಷಣಿಕವಾಗಿ ಬೆಂಬಲಿಸಿ, ಪ್ರೋತ್ಸಾಹಿಸಿ ಭೇಷ್ ಎಂದು ಹುರಿದುಂಬಿಸುವ ಕೆಲಸ ಸದ್ದಿಲ್ಲದೆ ನಡೆದಿದೆ.

2022ರಲ್ಲಿ ಧಾರವಾಡದ ಕೆಸಿಎಸ್ ಅಕಾಡೆಮಿಯಲ್ಲಿ ಹಾನಗಲ್ಲ ತಾಲೂಕಿನ 70 ವಿದ್ಯಾರ್ಥಿಗಳಿಗೆ ಐಎಎಸ್, ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಊಟ, ವಸತಿ ಸಹಿತ ಎಲ್ಲ ಅನುಕೂಲ ಕಲ್ಪಿಸಿ, ಪರಿಣತ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ದೊರಕಿಸಿದ ಶಾಸಕ ಶ್ರೀನಿವಾಸ ಮಾನೆ, ಹಾನಗಲ್ಲಿನಲ್ಲಿಯೇ ಇಂತಹ ಶಿಕ್ಷಣಕ್ಕೆ ಅವಕಾಶವಾಗಬೇಕು ಎಂಬ ಮಹದಾಸೆ ಹೊಂದಿದ್ದರು. 2023ರ ವಿಧಾನಸಭೆಯ ಸಾರ್ವತ್ರಿಕ ಚುನಾವಣೆಯಲ್ಲಿ ಹಾನಗಲ್ಲಿನಲ್ಲಿ ಉಚಿತ ತರಬೇತಿ ಕೇಂದ್ರ ಆರಂಭಿಸುವ ಭರವಸೆ ನೀಡಿದ್ದರು.



ಕಳೆದ ವರ್ಷ ಪ್ರಶಸ್ತಿ ಪಡೆದ ವಿದ್ಯಾರ್ಥಿಗಳೊಂದಿಗೆ ಶಾಸಕ ಶ್ರೀನಿವಾಸ ಮಾನೆ. (ಸಂಗ್ರಹ ಚಿತ್ರ)

ಚುನಾವಣೆಯಲ್ಲಿ ಜಯಶೀಲರಾದ ಕೆಲದಿನಗಳಲ್ಲಿ ಶ್ರೀನಿವಾಸ ಮಾನೆ ಅವರ ಮಹಾಪೋಷಕತ್ವದ ಬೆಂಬಲದೊಂದಿಗೆ ನ್ಯಾಯವಾದಿ ಸ್ವಾತಿ ಮಾಳಗಿ ಅವರ ಅಧ್ಯಕ್ಷತೆಯಲ್ಲಿ 2023ರಲ್ಲಿ ಹಾನಗಲ್ಲಿನಲ್ಲಿ ಆರಂಭವಾದ ಹ್ಯುಮ್ಯಾನಿಟಿ ಫೌಂಡೇಶನ್‌ನ ಪರಿವರ್ತನ ಕಲಿಕಾ ಕೇಂದ್ರ ಈ ವರೆಗೆ 5 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಐಎಎಸ್, ಕೆಎಎಸ್, ಸಿಇಟಿ, ನೀಟ್, ಸ್ಪೋಕನ್ ಇಂಗ್ಲಿಷ್, ಎನ್‌ಎಂಎಂಎಸ್, ಎಸ್‌ಎಸ್‌ಎಲ್‌ಸಿ ವರ್ಗ ಪೂರ್ವ ತರಬೇತಿ, ಸೈನ್ಯ ಸೇರುವ ಯುವಕರಿಗೆ ತರಬೇತಿ, ಹದಿಹರೆಯದ ಮಕ್ಕಳಿಗೆ ಮಾರ್ಗದರ್ಶನ ಶಿಬಿರಗಳನ್ನು ನಡೆಸುತ್ತ ಬಂದಿದೆ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಫಲಿತಾಂಶ ಸುಧಾರಣೆಗಾಗಿ ತಾಲೂಕಿನ ಎಲ್ಲ ಸರ್ಕಾರಿ, ಅನುದಾನಿತ, ಅನುದಾನ ರಹಿತ ಪ್ರೌಢಶಾಲೆಗಳ ಕನ್ನಡ, ಆಂಗ್ಲ ಉರ್ದು ಮಾಧ್ಯಮದ ವಿದ್ಯಾರ್ಥಿಗಳಿಗೆ 6 ಸಾವಿರಕ್ಕೂ ಅಧಿಕ ಮಾರ್ಕ್ಸ್ ಸ್ಕೋರರ್‌ಪುಸ್ತಕಗಳನ್ನು ನೀಡಿ ಅತ್ಯುತ್ತಮ ಪರೀಕ್ಷಾ ಸಿದ್ಧತೆಗೆ ಅನುಕೂಲ ಕಲ್ಪಿಸಿ, ಫಲಿತಾಂಶ ಸುಧಾರಣೆಗೆ ಕೈ ಜೋಡಿಸಲಾಗಿದೆ. ತಾಲೂಕಿನ ಎಸ್‌ಎಸ್‌ಎಲ್‌ಸಿ ಫಲಿತಾಂಶ ಕಳೆದ ಮೂರು ವರ್ಷಗಳಿಂದ ಏರಿಕೆ ಕಾಣುತ್ತಿರುವುದು ವಿಶೇಷ.

ಉದ್ಯೋಗ ಸಮೃದ್ಧಿ ಕೇಂದ್ರದ ಮೂಲಕ 10 ಸಾವಿರಕ್ಕೂ ಅಧಿಕ ಉದ್ಯೋಗಾಕಾಂಕ್ಷಿ ಯುವಕ ಯುವತಿಯರಿಗೆ ಮಾಹಿತಿ ಮಾರ್ಗದರ್ಶನ ನೀಡಿದ್ದಲ್ಲದೇ, 3200ಕ್ಕೂ ಅಧಿಕ ಉದ್ಯೋಗಾಕಾಂಕ್ಷಿ ಯುವಕ, ಯುವತಿಯರಿಗೆ ವಿವಿಧ ಉದ್ಯಮಗಳಲ್ಲಿ ಉದ್ಯೋಗ ಕಲ್ಪಿಸಿರುವುದು ಹೆಮ್ಮೆಯ ಸಂಗತಿ.



ಗ್ರಾಮೀಣ ಮಕ್ಕಳಲ್ಲಿ ಪ್ರತಿಭಾನ್ವಿತ ಶೈಕ್ಷಣಿಕ ಆಸಕ್ತಿ ಅಭಿಮಾನ ಪಡುವಂತಹದ್ದಾಗಿದೆ. ಇದಕ್ಕೆ ನೀರೆರೆಯಬೇಕಷ್ಟೇ. ನಮ್ಮ ಹಾನಗಲ್ಲಿನ ವಿದ್ಯಾರ್ಥಿಗಳು ಎಲ್ಲ ಪರೀಕ್ಷೆಗಳಲ್ಲಿ ಯಶಕ್ಕೆ ನಮ್ಮಿಂದಲೂ ಪ್ರಾಮಾಣಿಕ ಯತ್ನ ನಡೆದೇ ಇದೆ. ಪರೀಕ್ಷೆ ಯುದ್ಧವಾಗುವುದು ಬೇಡ, ವಿದ್ಯೆ ಸಂಪಾದನೆ ಹಬ್ಬವಾಗಬೇಕು. ಅದಕ್ಕೆ ಪಾಲಕ ಶಿಕ್ಷಕ ವಿದ್ಯಾರ್ಥಿ ಯತ್ನದ ಜತೆಗೆ ಸಾಮಾಜಿಕ ಸಂಘಟನೆಗಳು ಕೈಜೋಡಿಸಬೇಕು. ಮಕ್ಕಳನ್ನು ಪ್ರೋತ್ಸಾಹಿಸಿ ಹುರಿದುಂಬಿಸಬೇಕು.

• **ಶ್ರೀನಿವಾಸ ಮಾನೆ** ಶಾಸಕ

ಮೇ 9ರಂದು ಇಲ್ಲಿನ ಪಿಎಂಶ್ರೀ ಶಾಸಕರ ಮಾದರಿ ಶಾಲೆಯ ಮೈದಾನದಲ್ಲಿ ತಾಲೂಕಿನ ಕಳೆದಶೈಕ್ಷಣಿಕವರ್ಷದಫಲಿತಾಂಶವನ್ನಾಧರಿಸಿ ಎಸ್‌ಎಸ್‌ಎಲ್‌ಸಿ, ಪಿಯುಸಿ, ಎನ್‌ಎಂಎಂಎಸ್, ಬಿಇಡಿ, ಸ್ನಾತಕೋತ್ತರ ಶಿಕ್ಷಣದಲ್ಲಿ ಅತ್ಯುತ್ತಮ ಸಾಧನೆ ತೋರಿದ 375 ವಿದ್ಯಾರ್ಥಿಗಳನ್ನು ಗೌರವಿಸುವ 3ನೇ ವರ್ಷದ ಸಾಧನೆ ಸಂಭ್ರಮಕ್ಕೆ ಸಾಕ್ಷಿಯಾಗುತ್ತಿದೆ. ಸನ್ಮಾನ, ಪ್ರಶಸ್ತಿ ಫಲಕ, ಪುಸ್ತಕ ಕೊಡುಗೆ, ಒಟ್ಟು ₹5 ಲಕ್ಷಕ್ಕೂ ಅಧಿಕ ನಗದು ಬಹುಮಾನವೂ ಸೇರಿ ವಿದ್ಯಾರ್ಥಿಗಳನ್ನು ಹುರಿದುಂಬಿಸುವ ಕಾರ್ಯ ಆಗಲಿದೆ.

ಶಿಗ್ಗಾಂವಿ ತಾಲೂಕಿನಲ್ಲಿ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಲ್ಲಿ ರೈತರಿಗೆ 2024-25ನೇ ಸಾಲಿನಲ್ಲಿ ಅನ್ಯಾಯವಾದಂತೆ 2025-26ನೇ ಸಾಲಿನ ಬೆಳೆ ವಿಮೆಯಲ್ಲೂ ಸಹಿತ ಪ್ರೀಮಿಯಂ ಹಣ ಕಟ್ಟಿದ ರೈತರಿಗೆ ಅನ್ಯಾಯವಾಗಿ ಮತ್ತೆ ಸಂಕಷ್ಟ ಎದುರಾಗಿದೆ.
● **ಶಶಿಧರ ಹೊನ್ನಣ್ಣವರ** ಜಿಪಂ ಮಾಜಿ ಸದಸ್ಯ

ಕನ್ನಡಪ್ರಭ
ಶನಿವಾರ 9.05.2026

ಬೆಳೆ ವಿಮೆ ಕಟ್ಟಿದ ರೈತರಿಗೆ ಅನ್ಯಾಯ-ಶಶಿಧರ ಆರೋಪ

● **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ತಾಲೂಕಿನಲ್ಲಿ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಲ್ಲಿ ರೈತರಿಗೆ 2024-25ನೇ ಸಾಲಿನಲ್ಲಿ ಅನ್ಯಾಯವಾದಂತೆ 2025-26ನೇ ಸಾಲಿನ ಬೆಳೆ ವಿಮೆಯಲ್ಲೂ ಸಹಿತ ಪ್ರೀಮಿಯಂ ಹಣ ಕಟ್ಟಿದ ರೈತರಿಗೆ ಅನ್ಯಾಯವಾಗಿ ಮತ್ತೆ ಸಂಕಷ್ಟ ಎದುರಾಗಿದೆ ಎಂದು ರೈತ ಮುಖಂಡ ಹಾಗೂ ಮಾಜಿ ಜಿಪಂ ಸದಸ್ಯ ಶಶಿಧರ ಹೊನ್ನಣ್ಣವರ ಆರೋಪಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ವರ್ಷದಂತೆ ಈ ವರ್ಷವೂ ಅವೈಜ್ಞಾನಿಕ ನಿಯಮದಿಂದ ಮತ್ತು ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯ ತನದಿಂದ ರೈತರಿಗೆ ಸಂಕಷ್ಟ ಎದುರಾಗಿದೆ, 2025-26 ನೇ ಸಾಲಿನಲ್ಲಿ 28 ಗ್ರಾ.ಪಂ ಪೈಕಿ 7 ಪಂಚಾಯತಿಗಳಿಗೆ ಮೆಕ್ಕೆಜೋಳಕ್ಕೆ ವಿಮೆ ಬಂದಿದ್ದು ಒಟ್ಟು 28 ಪಂಚಾಯತಿಯ ಪ್ರೀಮಿಯಂ ಹಣ ಸುಮಾರು 1,73,24,635/- ಪ್ರೀಮಿಯಂ ಹಣ ಕಟ್ಟಿದ್ದು ಇನ್ನೂ 21 ಪಂಚಾಯಿತಿಗೆ ಅನ್ಯಾಯ ಮಾಡಲಾಗಿದೆ. ಅದರಂತೆ ಬಂಕಾಪುರ ಹೋಬಳಿಗೆ ನೀರಾವರಿ ಆಶ್ರಿತ ಭತ್ತದ ಬೆಳೆಗೆ ವಿಮೆ ಬಂದಿದ್ದು ಮಳೆ ಆಶ್ರಿತ ಭತ್ತಕ್ಕೆ ಕೇವಲ ಕುನ್ನೂರ ಪಂಚಾಯಿತಿಗೆ ವಿಮೆ ಬಂದಿದೆ. ಮಳೆ ಆಶ್ರಿತ ಭತ್ತಕ್ಕೆ 285 ಜನ ರೈತರು 1,68,862 ಪ್ರಿಮಿಯಂ ಹಣ ತುಂಬಿದ್ದು, ಅದಕ್ಕೆ 9,89,115 ವಿಮೆ ಬಂದಿರುತ್ತದೆ. ಅದೇ ರೀತಿ ನೀರಾವರಿ ಭತ್ತಕ್ಕೆ 1033 ರೈತರು 14,51,359/- ಪ್ರೀಮಿಯಂ ಹಣ ತುಂಬಿದ್ದು 4,05,84,174/- ಪ್ರೀಮಿಯಂ ಬಂದಿದೆ.



ಶಿಗ್ಗಾಂವಿ ಪಟ್ಟಣದಲ್ಲಿ ಜಿಪಂ ಮಾಜಿ ಸದಸ್ಯ ಶಶಿಧರ ಹೊನ್ನಣ್ಣವರ ಸುದ್ದಿಗಾರರೊಂದಿಗೆ ಮಾತನಾಡಿದರು.

ಶಿಗ್ಗಾಂವಿ ಹೋಬಳಿಗೆ ಹತ್ತಿ ಬೆಳೆಗೆ 99 ಜನ ರೈತರು 1522,86 ಪ್ರೀಮಿಯಂ ಹಣ ತುಂಬಿದ್ದು 42,64,17 ರು. ವಿಮೆ ಬಂದಿರುತ್ತದೆ. ಈ ರೀತಿ ಅವೈಜ್ಞಾನಿಕ ನಿಯಮದಿಂದ ರೈತರು ವಿಮೆಯಿಂದ ವಂಚಿತರಾಗಿದ್ದಾರೆ ಎಂದರು.

ತಾಲೂಕಿನಲ್ಲಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದ್ದು ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯತನದಿಂದ ಅವೈಜ್ಞಾನಿಕ ಸಮೀಕ್ಷೆ ಮಾಡಿ ಕೇವಲ 759.33 ಹೆಕ್ಟರ ಪ್ರದೇಶವನ್ನು ಹಾನಿ ಪ್ರದೇಶವೆಂದು ಗುರುತಿಸಿ ಹಾನಿಯಲ್ಲೂ ಸಹಿತ ರೈತರಿಗೆ ವಂಚಿಸಿದ್ದಾರೆ. ರೈತರು ಬೆಳೆ ವಿಮೆಗೆ ಕೇವಲ ಪ್ರೀಮಿಯಂ ಹಣ ತುಂಬಿ ಈ ಸಾರಿಯಾದರೂ ವಿಮೆ ಬರುತ್ತದೆ ಎಂಬ ನಂಬಿಕೆ ಹುಸಿಯಾಗಿದೆ. ರೈತರಿಗೆ ಸಮಗ್ರವಾಗಿ ಬೆಳೆವಿಮೆ ಒದಗಿಸಿಕೊಡಬೇಕೆಂದು ರೈತರ ಕೂಗಿಗೆ ಕವಡೆ ಕಾಸಿನ ಕಿಮತ್ತು ಕೊಡದೆ ಇರುವ ವಿಮೆ ಕಂಪನಿಗಳು ಅವೈಜ್ಞಾನಿಕ ನಿಯಮದಿಂದ ರೈತರನ್ನು ದುಸ್ಥಿತಿಗೆ ಸಿಲುಕಿಸಿ ಕೈತೊಳೆದು ಕೊಂಡಿದೆ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನಾರಾಯಣಪುರ ಡಿಪಿಪಿ ಸೊಸೈಟಿಯ ಅಧ್ಯಕ್ಷ ಉಮೇಶ ಅಂಗಡಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿದ್ದಲಿಂಗೇಶ್ವರ ಕಲಿವಾಳ, ಷಣ್ಮುಖ ಕಾಳಣ್ಣವರ, ಮಂಜುನಾಥಗೌಡ ಗೋಟಗೋಡಿ, ಶಿವಾನಂದ ತೊಂಡೂರ, ಶಂಕರ ಹೊಸಕಟ್ಟಿ, ಮಲ್ಲೇಶಪ್ಪ ಬೂದಿಹಾಳ, ಸುರೇಶ ಮೂರಾರಿ, ಮಾಲತೇಶ ಕಮ್ಮಾರ, ಜಗದೀಶ ಶಿದ್ದಪ್ಪನವರ, ಬಸವಣ್ಣೆಪ್ಪ ಗುಳೇದಕೇರಿ, ಗದಗಯ್ಯ ಹಿರೇಮಠ, ನಿಂಗಪ್ಪ ಹರಿಜನ, ಸಂತೋಷ ದೊಡ್ಡಮನಿ, ಶಿವನಾಗಪ್ಪ ಲಕ್ಷೇಶ್ವರ, ದುಂಡಪ್ಪ ರಾಯಣ್ಣವರ ಸೇರಿದಂತೆ ಇತರ ರೈತರು ಇದ್ದರು.

ವಿಮಾ ಕಂಪನಿಯ ಮೇಲೆ ಸಂಶಯ:

ತಾಲೂಕಿನ 28 ಪಂಚಾಯಿತಿಗಳ ಪೈಕಿ 7 ಪಂಚಾಯಿತಿಗೆ ವಿಮೆ ಬಂದಿದ್ದು, ಹಿರೇಮಣಕಟ್ಟಿ ಗ್ರಾಮ ಪಂಚಾಯಿತಿಗೆ ಕೇವಲ ಒಬ್ಬ ರೈತನಿಗೆ ವಿಮೆ ಬಂದಿರುತ್ತದೆ. ಇದು ಒಟ್ಟು ಪಂಚಾಯಿತಿಗೆ ಬೆಳೆ ವಿಮೆ ಬರದೇ ಕೇವಲ ಒಬ್ಬ ರೈತನಿಗೆ ಬಂದಿದ್ದು, ವಿಮಾ ಕಂಪನಿಯ ಮೇಲೆ ಸಂಶಯ ಮೂಡಿದೆ. ಆ ಪಂಚಾಯತಿಯನ್ನು ವಿಮೆಗೆ ಏಕೆ ಸೇರಿಸಿಲ್ಲ ಎಂಬ ಪ್ರಶ್ನೆ ಉದ್ಭವವಾಗಿದೆ.

ರಾಣೆಬೆನ್ನೂರು ರಿಂಗ್ ರಸ್ತೆ ನಿರ್ಮಾಣಕ್ಕೆ ಶೀಘ್ರದಲ್ಲಿ ಚಾಲನೆ

ಮಹರ್ಷಿ ವಾಲ್ಮೀಕಿ ಋಷಿಗಳ ದೇವಸ್ಥಾನ ಉದ್ಘಾಟಿಸಿದ ಸಚಿವ ಲೋಕೋಪಯೋಗಿ ಸತೀಶ ಜಾರಕಿಹೊಳಿ

● **ಕನ್ನಡಪ್ರಭ ವಾರ್ತೆ** ಕುಮಾರಪಟ್ಟಣ

ದಿನದಿಂದ ದಿನಕ್ಕೆ ವೇಗವಾಗಿ ಬೆಳೆಯುತ್ತಿರುವ ಮಹಾ ನಗರಗಳ ಸಾಲಿನಲ್ಲಿ ರಾಣೆಬೆನ್ನೂರು ಸೇರ್ಪಡೆಗೊಂಡಿದ್ದು, ಬೆಳೆಯುತ್ತಿರುವ ನಗರದ ಸಮಗ್ರ ಅಭಿವೃದ್ಧಿಗಾಗಿ ಅವಶ್ಯವಿರುವ ರಿಂಗ್ ರಸ್ತೆಗಾಗಿ ಶಾಸಕ ಪ್ರಕಾಶ ಕೋಳಿವಾಡರು ಮನವಿ ಮಾಡಿದ್ದು, ಆದಷ್ಟು ಬೇಗ ರಿಂಗ್ ರಸ್ತೆ ನಿರ್ಮಾಣಕ್ಕಾಗಿ ಚಾಲನೆ ನೀಡಲಾಗುವುದೆಂದು ರಾಜ್ಯ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ತಾಲೂಕಿನ ಚಳಗೇರಿ ಗ್ರಾಮದ ರೈಲ್ವೆ ನಿಲ್ದಾಣ ರಸ್ತೆಯ ಪಕ್ಕದ ಬೀರಲೀಗೇಶ್ವರ ದೇವಸ್ಥಾನದ ಸಮೀಪದಲ್ಲಿ ನೂತನವಾಗಿ ನಿರ್ಮಿಸಿರುವ ಮಹರ್ಷಿ ವಾಲ್ಮೀಕಿ ಋಷಿಗಳ ದೇವಸ್ಥಾನ ಉದ್ಘಾಟಿಸಿ ಅವರು ಮಾತನಾಡಿದರು.

ಚಳಗೇರಿ ಗ್ರಾಮದ ಸಮಗ್ರ ಅಭಿವೃದ್ಧಿಗಾಗಿ ಒಳಚರಂಡಿ, ಉತ್ತಮರಸ್ತೆ, ಹೊರಚರಂಡಿ, ಸರ್ಮರ್ಪಕ ಕುಡಿಯುವ ನೀರಿನ ವ್ಯವಸ್ಥೆಗಾಗಿ ಎಪಿಎಂಸಿ ಮಾಜಿ ಅಧ್ಯಕ್ಷರು, ಗ್ರಾಮದ ಮುಖಂಡರು ಆಗಿರುವ ಸಣ್ಣತಮ್ಮಪ್ಪ ಭಾರ್ಕಿ ಅವರು 3 ಕೋಟಿ ರು. ಗಳ ಬೇಡಿಕೆ ಇಟ್ಟಿದ್ದಾರೆ. ಅವರ ಮನವಿಯಂತೆ ಈಗಾಗಲೆ 1 ಕೋಟಿ ರು. ಬಿಡುಗಡೆಗೊಳಿಸಿದ್ದು. ಮುಂದಿನ ಬಜೆಟ್‌ನಲ್ಲಿ ಉಳಿದ 2 ಕೋಟಿಗಳನ್ನು ಬಿಡುಗಡೆಗೊಳಿಸುವುದಾಗಿ ಭರವಸೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಸಕ ಪ್ರಕಾಶ ಕೋಳಿವಾಡ ಅವರು ಮಾತನಾಡಿ, ಶಿಕ್ಷಣದಿಂದಲೆ ಸರ್ವವನ್ನು ಸಂಪಾದಿಸಲು ಸಾಧ್ಯವೆಂದರಿತು, ಕ್ಷೇತ್ರದಾದ್ಯಂತ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಲಾಗಿದ್ದು, ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ರೋಬೋ ಟೀಚರ್‌ಗಳನ್ನು ಪ್ರಾಯೋಗಿಕವಾಗಿ ಈಗಾಗಲೆ ಕೆಲ ಶಾಲೆಗಳಲ್ಲಿ ಅಳವಡಿಸಿದ್ದೆವೆ. ಮುಂದಿನ ದಿನಮಾನಗಳಲ್ಲಿ ಕ್ಷೇತ್ರದ ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿನ ಶಾಲೆಗಳಿಗೆ ರೋಬೋ ಟೀಚರ್‌ಗಳನ್ನು ನೀಡಲಾಗುವುದು. ರಾಣೆಬೆನ್ನೂರು ನಗರಕ್ಕೆ ಅವಶ್ಯವಿರುವ ರಿಂಗ್ ರಸ್ತೆ ನಿರ್ಮಾಣಕ್ಕೆ ಸರ್ಕಾರವು ಭರವಸೆ ನೀಡಿರುವುದು ಸಂತಸದ ವಿಷಯ ಎಂದು ತಿಳಿಸಿದರು.



ಚಳಗೇರಿ ರೈಲ್ವೆ ನಿಲ್ದಾಣ ರಸ್ತೆಯ ಪಕ್ಕದ ಬೀರಲೀಗೇಶ್ವರ ದೇವಸ್ಥಾನದ ಸಮೀಪದಲ್ಲಿ ನೂತನವಾಗಿ ನಿರ್ಮಿಸಿರುವ, ಮಹರ್ಷಿ ವಾಲ್ಮೀಕಿ ಋಷಿಗಳ ನೂತನ ದೇವಸ್ಥಾನವನ್ನು ಸಚಿವ ಸತೀಶ್ ಜಾರಕಿಹೊಳಿ ಉದ್ಘಾಟಿಸಿದರು.

ಮಹನೀಯರನ್ನು ಜಾತಿಗೆ ಸೀಮಿತಗೊಳಿಸಬೇಡಿ

ಪ್ರಪಂಚದ ಸರ್ವರೂ ಮೆಚ್ಚಿಕೊಳ್ಳುವಂಥಹ ಧರ್ಮಗ್ರಂಥವೆಂದು ಕರೆಯುವ ವಾಲ್ಮೀಕಿ ರಾಮಾಯಣವನ್ನು ರಚಿಸಿರುವ ಮಹರ್ಷಿ ವಾಲ್ಮೀಕಿ ಋಷಿಗಳನ್ನು, ಬುದ್ಧ, ಬಸವ, ಅಲ್ಲಮ ಸೇರಿದಂತೆ ಭರತ ಖಂಡದಲ್ಲಿ 12ನೇ ಶತಮಾನದಲ್ಲಿ ಹಾಗೂ ಅದಕ್ಕೂ ಪೂರ್ವದಲ್ಲಿ ಅವತರಿಸಿರುವ ಸಾಧು, ಸಂತರು, ಸಿದ್ಧರು, ಸತ್ಪುರುಷ, ತತ್ವಜ್ಞಾನಿಗಳನ್ನು, ಶರಣರನ್ನು, ಮಹನಿಯರನ್ನು ಒಂದು ಜಾತಿಗೆ, ಧರ್ಮಕ್ಕೆ ಸೀಮಿತಗೊಳಿಸಬಾರದು ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಅವರು ಅಖಂಡ ಭಾರತದಲ್ಲಿನ ಹಾಗೂ ಪ್ರಪಂಚದ ಸಮಸ್ತ ಮಾನವಕುಲದ ಕಲ್ಯಾಣಕ್ಕಾಗಿ ನೀಡಿರುವ ಧರ್ಮ ಸಂದೇಶ ಸರ್ವರಿಗೂ, ಸರ್ವಕಾಲಕ್ಕೂ ಒಪ್ಪುವಂತಾಗಿದ್ದು, ಅವರು ಹಾಕಿಕೊಟ್ಟಿರುವ ಮಾರ್ಗದಲ್ಲಿ ಸಮಗ್ರ ಮನುಕುಲವು ಸಾಗುವುದರೊಂದಿಗೆ ತಮ್ಮ ಜೀವನ ಸಾರ್ಥಕಪಡಿಸಿಕೊಳ್ಳಬೇಕು. ಕೇವಲ ಪೂಜಿಸುವುದಕ್ಕಾಗಿಯೇ ಮೂರ್ತಿ ಪ್ರತಿಷ್ಠಾಪಿಸುವುದಕ್ಕಿಂತ, ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಹಾಗಾದಲ್ಲಿ ಅವರ ಮೂರ್ತಿಗಳನ್ನು ಪೂಜಿಸಿದ್ದು ಸಾರ್ಥಕವಾಗುತ್ತದೆ ಎಂದರು.

ಎಪಿಎಂಸಿ ಮಾಜಿ ಅಧ್ಯಕ್ಷ ಸಣ್ಣತಮ್ಮಣ್ಣ ಭಾರ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಾಜಿ ಸಚಿವ ಆರ್. ಶಂಕರ್, ಹರಿಹರ ಮಾಜಿ ಶಾಸಕ ಎಸ್. ರಾಮಪ್ಪ, ಹಾವೇರಿ ಹಾಲು ಉತ್ಪಾದಕರ ಸಹಕಾರಿ ಮಹಾ ಮಂಡಳ ಅಧ್ಯಕ್ಷ ಮಂಜನಗೌಡ ಪಾಟೀಲ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಪರಮೇಶಪ್ಪ ಮೇಗಳಮನಿ, ಮಾಜಿ ಸದಸ್ಯ ಕೃಷ್ಣಪ್ಪ ಕಂಬಳಿ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಮಂಜುನಾಥ ಗೌಡಶಿವಣ್ಣನವರ, ನಗರಸಭೆ ಮಾಜಿ ಸದಸ್ಯ ಪುಟ್ಟಪ್ಪ ಮರಿಯಮ್ಮನವರ, ಮುಖಂಡರಾದ ಬಸನಗೌಡ ಮರದ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರುಗಳಾದ ಬುಡನ್ ಸಾಬ ದೊಡ್ಮನಿ, ರವಿಂದ್ರಗೌಡ ಎಫ್. ಪಾಟೀಲ, ದರ್ಶನ್ ರುದ್ರಪ್ಪ ಲಮಾಣಿ, ಚಿರಂಜೀವಿ ಭಾರ್ಕಿ, ವಾಲ್ಮೀಕಿ ಸಮಾಜದ ಅಧ್ಯಕ್ಷ ಚಂದ್ರಪ್ಪ ಬೇಡರ್, ಮೌಲಾಸಾಬ ಪ್ಲಾಟ್, ಚಳಗೇರಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು ಸದಸ್ಯರು ಇದ್ದರು.





ಪಡಿತರ ಆಹಾರ ಧಾನ್ಯ ವಿತರಣೆ

● **ಕನ್ನಡಪ್ರಭ ವಾರ್ತೆ** ಹಾವೇರಿ

ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಪಡಿತರ ಆಹಾರ ಧಾನ್ಯಗಳನ್ನು ಪೂರೈಸುತ್ತಿದ್ದು, ಮೇ ಹಾಗೂ ಜೂನ್ ಎರಡು ತಿಂಗಳಿಗೆ ಜಿಲ್ಲೆಯ ಅಂತ್ಯೋದಯ ಅನ್ನ ಪಡಿತರ ಚೀಟಿ, ಪಿಎಚ್‌ಎಚ್ (ಬಿಪಿಎಲ್) ಪಡಿತರ ಚೀಟಿದಾರರಿಗೆ ಪಡಿತರ ಆಹಾರಧಾನ್ಯವನ್ನು ವಿತರಣೆ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

ಮೇ ಹಾಗೂ ಜೂನ್‌ಗೆ ಸಂಬಂಧಿಸಿದಂತೆ ಅಂತ್ಯೋದಯ ಪಡಿತರ ಚೀಟಿ (ಪ್ರತಿ ಕಾರ್ಡಿಗೆ) 35 ಕೆಜಿ+ 35 ಕೆಜಿ ಸೇರಿ 70 ಕೆಜಿ ಅಕ್ಕಿ ಹಾಗೂ ಆದ್ಯತಾ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ (ರಾಜ್ಯ ಮತ್ತು ಕೇಂದ್ರ ವರ್ಗದಡಿಯ ಪಡಿತರ ಕಾರ್ಡುಗಳಿಗೆ) 5 ಕೆಜಿ + 5 ಕೆಜಿ ಸೇರಿ 10 ಕೆಜಿ ಅಕ್ಕಿ ವಿತರಣೆ ಮಾಡಲಾಗುತ್ತದೆ.

ಮೇ-2026ನೇ ತಿಂಗಳಲ್ಲಿ ಕೇಂದ್ರ ವ್ಯಾಪ್ತಿ ಅಂದರೆ, ಎನ್.ಎಫ್.ಎಸ್.ಎ. ವರ್ಗದಡಿ ಮೇ ಮತ್ತು ಜೂನ್ 2026 ಎರಡೂ ತಿಂಗಳ ಪಡಿತರ ಆಹಾರ ಧಾನ್ಯವನ್ನು ವಿತರಿಸಲಾಗುತ್ತಿದ್ದು, ಎಲ್ಲ ಅರ್ಹ ಫಲಾನುಭವಿಗಳು ತಮ್ಮ ವ್ಯಾಪ್ತಿಯ ನ್ಯಾಯಬೆಲೆ ಅಂಗಡಿಗಳಲ್ಲಿ ಎರಡೂ ತಿಂಗಳಿಗೆ ಸಂಬಂಧಿಸಿದಂತೆ ಮಾಹೆವಾರು ಪ್ರತ್ಯೇಕವಾಗಿ ಬೆರಳಚ್ಚು ನೀಡಿ ಪಡಿತರ ಪಡೆಯಬೇಕು ಎಂದು ತಿಳಿಸಿದ್ದಾರೆ.

ಇಂದು ಸಾರಿಗೆ ವ್ಯತ್ಯಯ

ಹಾವೇರಿ: ಚಿತ್ರದುರ್ಗದಲ್ಲಿ ನಡೆಯಲಿರುವ ಖಾಸಗಿ ಸಮಾವೇಶಕ್ಕೆ ಪ್ರಾಸಂಗಿಕ ಕರಾರಿನ ಮೇಲೆ ವಾ.ಕ.ರ.ಸಾ.ಸಂಸ್ಥೆ ಹಾವೇರಿ ವಿಭಾಗದಿಂದ ಒಟ್ಟು 150 ವಾಹನಗಳನ್ನು ಪೂರೈಸುತ್ತಿರುವುದರಿಂದ ಮೇ 9ರಂದು ಬಸ್ಸುಗಳಕೊರತೆಯಿಂದಾಗಿಮಾರ್ಗಗಳ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಹಾಗೂವಿದ್ಯಾರ್ಥಿಗಳುಸಂಸ್ಥೆಯೊಂದಿಗೆ ಸಹಕರಿಸಬೇಕು ಎಂದು ವಾ.ಕ.ರ.ಸಾ. ಸಂಸ್ಥೆ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





